ಸಂಪುಟ: 4 | ಸಂಚಿಕೆ 104 | ಪುಟ: 4 | ₹: 4 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ
ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
Read,Share and Follow - www.belagavivaradi.com
Vol-04 | Issue: 104 | Thursday, 08, June, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ರಾಜ್ಯ ಸರ್ಕಾರದಿಂದ ಗೃಹ ಲಕ್ಷ್ಮೀ ಯೋಜನೆಗೆ ಮಾರ್ಗಸೂಚಿ ಪ್ರಕಟ

ಬೆಂಗಳೂರು: ಕರ್ನಾಟಕ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2,000ಗಳನ್ನು ನೀಡುವ ಗೃಹಲಕ್ಷ್ಮೀ ಯೋಜನೆಗೆ ಆಡಳಿತಾತ್ಮಕ ಅನುಮೋದನೆಯನ್ನು ಸರ್ಕಾರ ನೀಡಿದೆ. ಈ ಮೂಲಕ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೊಳಿಸಿ ಅಧಿಕೃತ ಆದೇಶ ಹೊರಡಿಸಿದೆ.

ಈ ಕುರಿತಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ನಡವಳಿಗಳನ್ನು ಹೊರಡಿಸಿದ್ದಾರೆ. ಅದರಲ್ಲಿ ರಾಜ್ಯದ ಮಹಿಳೆಯರ ಆರ್ಥಿಕ ಸಬಲೀಕರಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರವು ಅನೇಕ ಯೋಜನೆಗಳನ್ನು ಹಮ್ಮಿಕೊಂಡಿರುತ್ತದೆ.

ಕುಟುಂಬ ನಿರ್ವಹಣೆಯಲ್ಲಿ ಕುಟುಂಬ ಯಜಮಾನಿಯ ಪಾತ್ರ ಪ್ರಮುಖವಾಗಿದ್ದು, ಯಜಮಾನಿಯು ಆರ್ಥಿಕವಾಗಿ ಸಬಲೀಕರಣಗೊಂಡಲ್ಲಿ, ಕುಟುಂಬ ನಿರ್ವಹಣೆಯು ಉತ್ತಮ ಗುಣಮಟ್ಟದಲ್ಲಿ ಇರುತ್ತದೆ. ಈ ಹಿನ್ನಲೆಯಲ್ಲಿ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2000 ನೀಡುವ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೆ ತರಲು ಪ್ರಸ್ತಾಪಿಸಲಾಗಿದೆ ಎಂದು ಪ್ರಸ್ತಾವನೆಯಲ್ಲಿ ತಿಳಿಸಿದ್ದಾರೆ.

ಮೇ 20 ರಂದು ನಡೆಸ ಸಚಿವ ಸಂಪುಟ ಸಭೆಯಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿತ್ತು. ಈ ಬಳಿಕ ಗೃಹಲಕ್ಷ್ಮೀ ಯೋಜನೆಯ ರೂಪರೇಷೆ ಹಾಗೂ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು ಎಂದು ತಿಳಿಸಲಾಗಿತ್ತು ಎಂದಿದ್ದಾರೆ.

ಈ ಹಿನ್ನಲೆಯಲ್ಲಿ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2000 ನೀಡುವ ಗೃಹ ಲಕ್ಷ್ಮೀ ಯೋಜನೆಯನ್ನು 2023–24ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ ಎಂದು ಹೇಳಿದ್ದಾರೆ.

**ಹೀಗಿವೆ ಗೃಹಲಕ್ಷ್ಮೀ ಯೋಜನೆಯ ಷರತ್ತುಗಳು**

ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯು ಈ ಯೋಜನೆಯ ಅರ್ಹ ಫಲಾನುಭವಿಯಾಗಿರುತ್ತಾರೆ.

ಒಂದೇ ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಮಹಿಳೆಯರಿದ್ದಲ್ಲಿ, ಒಂದು ಮಹಿಳೆಗೆ ಮಾತ್ರ ಯೋಜನೆ ಅನ್ವಯಲಿದೆ.

ಈ ಯೋಜನೆಯ ಫಲಾನುಭವಿಗಳು 2023ರ ಜೂನ್ 15 ರಿಂದ ಜುಲೈ 15ರವರೆಗೆ ಅರ್ಜಿ ಸಲ್ಲಿಸುವುದು. ಈ ನಂತ್ರ ಜುಲೈ.15ರಿಂದ ಫಲಾನುಭವಿಗಳ ಆಯ್ಕೆ ಮಾಡಲಾಗುವುದು. ಆಯ್ಕೆಗೊಂಡ ಫಲಾನುಭವಿಗಳಿಗೆ ಆಗಸ್ಟ್ 15ರಂದು ಅವರ ಬ್ಯಾಂಕ್ ಖಾತೆಗೆ ಹಣವನ್ನು ವರ್ಗಾವಣೆ ಮಾಡಲಾಗುವುದು.

ಅರ್ಜಿದಾರರು ಸೇವಾ ಸಿಂಧು ಪೋರ್ಟಲ್ ಮೂಲಕವಾಗಲಿ ಅಥವಾ ಭೌತಿಕವಾಗಿ ಆಗಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿದಾರರು ಸಲ್ಲಿಸುವ ಪೂರ್ಣ ಪ್ರಮಾಣ ಅರ್ಜಿಯಲ್ಲಿನ ಸ್ವಯಂ ಘೋಷಣೆ ಆಧಾರದ ಮೇಲೆ ಮಂಜೂರಾತಿ ನೀಡುವುದು. ಅರ್ಜಿಯಲ್ಲಿನ ಅಂಶಗಳ ಬಗ್ಗೆ ತದನಂತರ ಪರಿಶೀಲನೆ ಮಾಡುವುದು.

## ಜಾತಿವಾರು ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವರದಿ ಸ್ವೀಕಾರ: ಮುಖ್ಯಮಂತ್ರಿ ಸಿದ್ದರಾಮಯ್ಯ



ಬೆಂಗಳೂರು: ಹಿಂದಿನ ಬಾರಿ ತಮ್ಮ ಸರ್ಕಾರದ ಅವಧಿಯಲ್ಲಿ ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಹಮ್ಮಿಕೊಳ್ಳಲಾದ ಜಾತಿವಾರು ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವರದಿಯನ್ನು ಸ್ವೀಕರಿಸಿ, ಅದರ ದತ್ತಾಂಶದ ಆಧಾರದಲ್ಲಿ ವಿವಿಧ ಸಮುದಾಯಗಳಿಗೆ ಅನುಕೂಲ ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಕರ್ನಾಟಕ ಶೋಷಿತ ವರ್ಗಗಳ ಮಹಾಒಕ್ಕೂಟದ ನಿಯೋಗವನ್ನು ಭೇಟಿ ಮಾಡಿ ಮಾತನಾಡಿದರು.

ಜಾತಿವಾರು ಸಮೀಕ್ಷೆಯಿಂದ ಜನರಿಗೆ ಒದಗಿಸಬೇಕಾದ ಸೌಲಭ್ಯಗಳು, (preferential treatment) ಮೊದಲಾದ ಅಂಶಗಳ ಕುರಿತು ಸೂಕ್ತ ನಿರ್ಧಾರ ಕೈಗೊಳ್ಳಲು ಅಗತ್ಯವಿರುವ ದತ್ತಾಂಶ ಲಭ್ಯವಾಗುವುದು.

ಮೀಸಲಾತಿ ಮತ್ತಿತರ ಸೌಲಭ್ಯಗಳನ್ನು ಒದಗಿಸಲು ವೈಜ್ಞಾನಿಕ ಹಾಗೂ ನಿಖರ ಮಾಹಿತಿ ಅತಿ ಅಗತ್ಯ. ಈ ಉದ್ದೇಶದಿಂದ ಜಾತಿವಾರು ಸಮೀಕ್ಷೆಯನ್ನು ನಡೆಸಲಾಗಿತ್ತು.

ಇದೀಗ ವರದಿಯನ್ನು ಸ್ವೀಕರಿಸಿ, ಅದರಲ್ಲಿನ ದತ್ತಾಂಶಗಳ ಆಧಾರದಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬಿಜೆಪಿ ಸರ್ಕಾರವು ಮೀಸಲಾತಿಯಲ್ಲಿ ಸೃಷ್ಟಿಸಿದ ಗೊಂದಲ ನಿವಾರಣೆ ಮಾಡಲಾಗುವುದು. ಇಲ್ಲವಾದರೆ ಯಾರಿಗೂ ಸಾಮಾಜಿಕ ನ್ಯಾಯ ಒದಗಿಸಲು ಸಾಧ್ಯವಾಗದು ಎಂದು ಮುಖ್ಯಮಂತ್ರಿಗಳು ಅಭಿಪ್ರಾಯಪಟ್ಟರು.

ಒಕ್ಕೂಟದ ಮುಖಂಡರಾದ ಕೆ.ಎಂ.ರಾಮಚಂದ್ರಪ್ಪ ಅವರ ನೇತೃತ್ವದಲ್ಲಿ ಮಾವಳ್ಳಿ ಶಂಕರ್, ಪ್ರೊ. ರವಿ ವರ್ಮಕುಮಾರ್, ಅನಂತ್ ನಾಯಕ್, ಡಾ.ನರಸಿಂಹಯ್ಯ, ಪ್ರೊ. ಜಾಫೆಟ್, ಬಿ.ಟಿ.ಲಲಿತಾನಾಯಕ್, ಜಿ.ಎಸ್.ಪಾಟೀಲ್ ಸೇರಿ 150 ಕ್ಕೂ ಹೆಚ್ಚು ಮಂದಿ ನಾನಾ ಜಾತಿಗಳ ಪ್ರತಿನಿಧಿಗಳು ಹಾಗೂ ಮುಖಂಡರು ಭಾಗವಹಿಸಿದ್ದರು.

### ಲೋಕಸಭೆ ಚುನಾವಣೆ

## 25 ಸ್ಥಾನ ಗೆಲ್ಲುವ ಗುರಿ: ಜಾರಕಿಹೊಳಿ



ನಿಪ್ಪಾಣಿ: 'ಬರುವ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ರಾಜ್ಯದಲ್ಲಿ ಸುಮಾರು 25 ಸಂಸದರನ್ನು ಚುನಾಯಿಸಲಾಗುವುದು' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ಕಾಂಗ್ರೆಸ್‌ನಿಂದ ರಾಜ್ಯದಲ್ಲಿ ಸುಮಾರು 25 ಸಂಸದರನ್ನು ಚುನಾಯಿಸಲಾಗುವುದು' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಸ್ಥಾನ ಸಿಕ್ಕ ನಂತರ ಪ್ರಥ–'ಮ ಬಾರಿಗೆ ನಗರಕ್ಕೆ ಆಗಮಿಸಿದ ನಂತರ ಇಲ್ಲಿನ ಮರಾಠಾ ಮಂಡಳ ಸಾಂಸ್ಕೃತಿ–ಕ ಭವನದಲ್ಲಿ ಮಂಗಳವಾರ ಕಾಂಗ್ರೆಸ್ ಕಾರ್ಯಕರ್ತ–ರಿಂದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಇನ್ನು ಮುಂದೆ ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ಲೋಕಸಭೆ ಚುನಾವಣೆಯತ್ತ ಎಲ್ಲರೂ ಗಮನ ಹರಿಸಿ, ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ತರಲು ಎಲ್ಲರೂ ಪ್ರಯತ್ನಿಸಬೇಕು. ಅಧಿಕಾರಕ್ಕೆ ಬಂದ ತಕ್ಷಣವೇ 5 ಭರವಸೆಗಳನ್ನು ಈಡೇ–ರಿಸಲಾಗಿದೆ. ಬಿಜೆಪಿಯವರು ದಾರಿ ತಪ್ಪಿಸುವ ಪ್ರಯತ್ನ ಮಾಡಿದ್ದಾರೆ.

ಇದು ಎಲ್ಲರಿಗೂ ಗೊತ್ತಾಗಿದೆ. ನಮ್ಮನ್ನು ಬಿಟ್ಟು ಹೋದವರು ನಮ್ಮೊಂದಿಗೆ ಮತ್ತೆ ಬರುತ್ತಾರೆ. ಮುಂಬರುವ ಚುನಾವಣೆಗಳಲ್ಲಿ ಗೆಲುವು ನಮ್ಮದೆ ಆಗಲಿದೆ' ಎಂದರು.

ಮಾಜಿ ಸಚಿವ ವೀರಕುಮಾರ ಪಾಟೀಲ ಮಾತನಾಡಿದರು. ವಿವಿಧ ಸಂಘಟನೆಗಳಿಂದ ಜಾರಕಿಹೊಳಿ ಅವರನ್ನು ಸನ್ಮಾನಿಸಲಾಯಿತು. ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣ ಚಿಂಗಳೆ, ಪಂಕಜ ಪಾಟೀಲ, ರಾಜೇಶ ವಡ್ಡರ, ರಾಜೇಂದ್ರ ವಡ್ಡರ, ಸುಮಿತ್ರಾ ಉಗಳೆ, ಧನಾಜಿ ಚವಾಣ, ರಾಜೇಂದ್ರ ಚವ್ಹಾಣ, ಅವಧೂತ ಗುರವ, ಮೊದಲಾದವರು ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

## ತಪ್ಪು ಮರುಕಳಿಸಿದರೆ ವರ್ಗಾವಣೆ ಖಚಿತ




ಬೆಳಗಾವಿ: ಬಹಳಷ್ಟು ಜನರು ಮಹಾನಗರ ಪಾಲಿಕೆ ಸಿಬ್ಬಂದಿಯ ಕಾರ್ಯ ವೈಖರಿ ಬಗ್ಗೆ ತಮ್ಮ ಅಭಿಪ್ರಾಯ ತಿಳಿಸಿದ್ದಾರೆ. ಅನೇಕ ಅಧಿಕಾರಗಳ ವಿರುದ್ಧ ಆರೋಪಗಳು ಕೇಳಿ ಬಂದಿದ್ದು ಮುಂಬರುವ ದಿನಗಳಲ್ಲಿ ಸುಧಾರಿಸದೇ ಹೋದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ನಡೆದ ಸ್ಮಾರ್ಟ್ ಸಿಟಿ, ಕುಡಿಯುವ ನೀರು ಸರಬರಾಜು, ಹೆಸ್ಕಾಂ ಸೇ–ರಿದಂತೆ ವಿವಿಧ ಇಲಾಖೆಗಳ ಕಾಮಗಾ–ರಿಗಳ ಪರಿಶೀಲನಾ ಸಭೆಯ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪ್ರಗತಿ ಪರಿಶೀಲನಾ ಸಭೆಯಲ್ಲಿ ಕೆಲವು ಸಲಹೆ ಸೂಚನೆ ನೀಡಿದ್ದು, ಅಧಿಕಾರಿಗಳು ಒಳ್ಳೆಯ ಕೆಲಸ ಮಾಡುತ್ತಾರೆ ಎಂಬ ಆಶಯವಿದೆ. ತಕ್ಷಣ ಎಲ್ಲರನ್ನೂ ಬದಲಾವಣೆ ಮಾಡಬೇಕು ಎಂಬ ಆಸೆಯೂ ಇಲ್ಲ, ಇಚ್ಚೆಯೂ ಇಲ್ಲ. ಮೂರು ತಿಂಗಳ ಬಳಿಕ ಬಂದಾಗ ಇದೇ ಸ್ಥಿತಿ ಇದ್ದರೆ ಅಂತಹ ಅಧಿಕಾರಿಗಳನ್ನು ತಪ್ಪದೇ ವರ್ಗಾವಣೆ ಮಾಡಿಸುತ್ತೇವೆ ಎಂದು ಎಚ್ಚರಿಸಿದರು.

ಬೆಳಗಾವಿ ಸ್ಮಾರ್ಟ್ ಸಿಟಿ, ಕುಡಿಯುವ ನೀರು ಪೂರೈಕೆ, ಪಿಡಬ್ಲ್ಯೂಡಿ, ಹೆಸ್ಕಾಂ ಸೇರಿದಂತೆ ಹಲವು ಇಲಾಖೆಗಳ ಬಗ್ಗೆ ಪ್ರತ್ಯೇಕ ಸಭೆ ಮಾಡುತ್ತೇವೆ. ಸಾರ್ವಜನಿಕ–ರಿಗೆ ಮೂಲಭೂತ ಸೌಕರ್ಯಗಳು, ಸರ್ಕಾರದ ಎಲ್ಲಾ ಸೇವೆಗಳನ್ನು ಸರಿಯಾಗಿ ಒದಗಿಸುವುದೇ ಸರ್ಕಾರ ಮೊದಲ ಆದ–'ೃತೆಯಾಗಿದೆ ಎಂದು ತಿಳಿಸಿದರು.

## ಅಂಗನವಾಡಿ ಕಾರ್ಯಕರ್ತೆಯರಿಗೆ ಸಿಹಿಸುದ್ದಿ : ಶೀಘ್ರವೇ ಗೌರವಧನ ಹೆಚ್ಚಳ



ಬೆಳಗಾವಿ : ಅಂಗನವಾಡಿ ಕಾರ್ಯಕರ್ತೆಯರಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸಿಹಿಸುದ್ದಿ ನೀಡಿದ್ದು, ಅಂಗನವಾಡಿ ಕಾರ್ಯಕರ್ತರ ಗೌರವಧನ ಹೆಚ್ಚಳ ಕು–ರಿತು ಚರ್ಚೆ ನಡೆಸಿ ಶೀಘ್ರವೇ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಧಾನಸಭೆ ಚುನಾವಣೆ ಪ್ರಣಾಳಿಕೆಯಲ್ಲಿ ಉಲ್ಲೇಖಿಸಿರುವ ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಹೆಚ್ಚಳ ಕುರಿತು ಸರ್ಕಾರ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ.

ಕಾಂಗ್ರೆಸ್ ಪಕ್ಷ ಕೊಟ್ಟ ಭರವಸೆಗಳನ್ನು ಈಡೇರಿಸಲಿದೆ. ಅಲ್ಲಿಯವರೆಗೆ ಸ್ವಲ್ಪ ತಾಳ್ಮೆ ಬೇಕು ಎಂದು ಹೇಳಿದ್ದಾರೆ.

ಗೃಹ ಲಕ್ಷ್ಮೀ ಯೋಜನೆಯ ಅರ್ಜಿ ಕರೆಯಲು ಅಧಿಕಾರಿಗಳ ಜೊತೆಗೆ ಚರ್ಚೆ ನಡೆಸಿದ್ದೇವೆ. ಜು. 1 ರಿಂದ 15 ರವರೆಗೆ ಅರ್ಜಿ ಪಡೆಯುವ ಪ್ರಕ್ರಿಯೆ ನಡೆಯಲಿದೆ.

ಫಲಾನುಭವಿಗಳ ಬ್ಯಾಂಕ್ ಖಾತೆ, ಆಧಾರ್ ಸಂಖ್ಯೆ ಜೋಡಣೆ ಮಾಡುವುದು, ಕುಟುಂಬದ ಮುಖ್ಯಸ್ಥೆಯನ್ನು ಖಚಿತಪಡಿಸಿಕೊಳ್ಳುವ ಕೆಲಸ ನಡೆಯುತ್ತಿದೆ. ಇದಕ್ಕಾಗಿ ಸಾಫ್ಟ್ ವೇರ್ ಅಭಿವೃದ್ಧಿಪಡಿಸಲಾಗುತ್ತಿದೆ ಎಂದರು.



ಜಮ್ಮು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಡಾ.ಫಾರೂಕ್ ಅಬ್ದುಲ್ಲಾ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಅಭಿನಂದಿಸಿದರು. ಸಚಿವ ಜಮೀರ್ ಅಹಮದ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹಮದ್, ಗೋವಿಂದರಾಜು ಉಪಸ್ಥಿತರಿದ್ದರು.

## ವಿಧಾನ ಪರಿಷತ್‌ನ 3 ಸ್ಥಾನಗಳಿಗೆ ಜೂ.30ಕ್ಕೆ ಉಪ ಚುನಾವಣೆ



ಬೆಂಗಳೂರು: ವಿಧಾನ ಪರಿಷತ್‌ನ 3 ಸ್ಥಾನಗಳಿಗೆ ಜೂನ್ 30ಕ್ಕೆ ಉಪ ಚುನಾವಣೆ ನಡೆಯಲಿದೆ.

ಬಾಬುರಾವ್ ಚಿಂಚನಸೂರ್, ಆರ್. ಶಂಕರ್ ಮತ್ತು ಲಕ್ಷ್ಮಣ್ ಸವದಿ ರಾಜೀನಾಮೆಯಿಂದ ತೆರವಾಗಿದ್ದ ಮೂರು ಸ್ಥಾನಗಳಿಗೆ ಉಪ ಚುನಾವಣೆ ನಡೆಸುವುದಾಗಿ ಕೇಂದ್ರ ಚುನಾವಣಾ ಆಯೋಗ ಮಾಹಿತಿ ನೀಡಿದೆ.

ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯುವ ಉಪ ಚುನಾವಣೆಯ ಅಧಿಸೂಚನೆ ಜೂನ್ 13ರಂದು ಪ್ರಕಟವಾಗಲಿದ್ದು, ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ. ಜೂನ್ 20 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಜೂನ್ 21 ನಾಮಪತ್ರ ಪರಿಶೀಲನೆ, ಜೂನ್ 23 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಜೂನ್ 30ಕ್ಕೆ ಮತದಾನ ನಡೆಯಲಿದ್ದು, ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆ ತನಕ ಮತದಾನ ನಡೆಯಲಿದೆ. ಅದೇ ದಿನ ಸಂಜೆ 5 ಗಂಟೆಗೆ ಮತ ಎಣಿಕೆ ಕಾರ್ಯ ನಡೆದು ಫಲಿತಾಂಶ ಘೋಷಣೆಯಾಗಲಿದೆ.

ಈ ಹಿಂದೆ ವಿಧಾನಸಭೆಯಿಂದ ವಿಧಾನಪರಿಷತ್ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿಯಿಂದ ಬಾಬುರಾವ್ ಚಿಂಚನಸೂರ್, ಆರ್. ಶಂಕರ್ ಮತ್ತು ಲಕ್ಷ್ಮಣ್ ಸವದಿ ಆಯ್ಕೆಯಾಗಿದ್ದರು. ಆದರೆ, ವಿಧಾನಸಭಾ ಚುನಾವಣೆಯಲ್ಲಿ ಟಿಕೆಟ್ ನೀಡದ ಹಿನ್ನೆಲೆಯಲ್ಲಿ ಇವರು ಬಿಜೆಪಿಗೆ ರಾಜೀನಾಮೆ ನೀಡಿದ್ದರು.

ವಿಧಾನಸಭಾ ಚುನಾವಣೆಯಲ್ಲಿ ಗುರುಮಿಠಕಲ್ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಬಾಬುರಾವ್ ಚಿಂಚನಸೂರ್ ಸ್ಪರ್ಧಿಸಿ ಸೋತಿ–ದ್ದರು. ಅದೇ ರೀತಿ ರಾಣೆಬೆನ್ನೂರಿನಿಂದ ಆರ್.ಶಂಕರ್ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಸೋಲು ಅನುಭವಿಸಿದ್ದರು. ಆದರೆ, ಅಥಣಿ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಲಕ್ಷ್ಮಣ್ ಸವದಿ ಗೆಲುವು ಪಡೆದಿದ್ದರು.

## ಟೇಬಲ್ ಕೆಳಗೂ, ಟೇಬಲ್ ಮೇಲಿನ ವ್ಯವಹಾರ ಬಿಟ್ಟುಬಿಡಿ: ಸಚಿವ ಸಂತೋಷ್ ಲಾಡ್



ಧಾರವಾಡ: ಸಾರ್ವಜನಿಕರ ಕೆಲಸಕ್ಕಾಗಿ ಅಧಿಕಾರಿಗಳು ಟೇಬಲ್ ಕೆಳಗೆ ಹಾಗೂ ಟೇಬಲ್ ಮೇಲೆ ಲಂಚ ಪಡೆಯುವ ಪ್ರಕ್ರಿಯೆ ಬಂದ್ ಆಗಬೇಕು. ನನ್ನ ಕಚೇರಿಯಿಂದಲೂ ಯಾರಾದ್ರೂ ಟೇಬಲ್ ಕೆಳಗಿನ ಮಾತುಗಳನ್ನಾಡಿದರೆ ನೇರವಾಗಿ ನನಗೆ ಕರೆ ಮಾಡಿ ತಿಳಿಸಿ ಎಂದು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡುವ ಮೂಲಕ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಅಧಿಕಾ–ರಿಗಳಿಗೆ ತಮ್ಮ ಮೊಬೈಲ್ ನಂಬರ್ ನೀಡಿದ್ದಾರೆ.

ಧಾರವಾಡ ತಾಲೂಕು ಪಂಚಾಯತ್‌ನಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರಾತ್ರಿ 10 ಗಂಟೆ ನಂತರವೂ ಅಧಿಕಾರಿಗಳು ನನಗೆ ಕರೆ ಮಾಡಬಹುದು. ನನಗೆ ಕುಡಿಯುವ ಅಭ್ಯಾಸ ಇಲ್ಲ. ನಾನು ಯಾರನ್ನೂ ಬೈಯುವುದಿಲ್ಲ. ಇಡೀ ವ್ಯವಸ್ಥೆಯಲ್ಲಿ ಏನಾದರೂ ಬದಲಾವಣೆ ತರಬೇಕು ಎಂದುಕೊಂಡಿದ್ದೇವೆ ಎಂದರು.

ಐದು ವರ್ಷ ಇದ್ದು ಹೋಗುತ್ತಾನೆ ಎಂದು ಭಾವಿಸಿದರೂ ಪರವಾಗಿಲ್ಲ. ನನ್ನ ಫಿಲಾಸಫಿ ಅಧಿಕಾರಿಗಳಿಗೆ ಇಷ್ಟ ಆಗಲಿಕ್ಕಿಲ್ಲ. ನಮ್ಮಲ್ಲಿ ಸ್ಪಿರಿಟ್ ಹಾಗೂ ಫ್ಯಾಶನ್ ಇಲ್ಲಾ ಅಂದ್ರೆ ಕೆಲಸ ಮಾಡೋದು ಕಷ್ಟ ಎಂದಿದ್ದಾರೆ.

ಅಧಿಕಾರಿಗಳಿಂದ ನಾನು ಬಹಳಷ್ಟು ನಿರೀಕ್ಷೆ ಇಟ್ಟಿದ್ದೇನೆ. ಯಾರು ವರ್ಗಾವಣೆಯಾಗುತ್ತಾರೆ ಯಾರು ಇರುತ್ತಾರೆ ಇದು ನನಗೆ ಸಂಬಂಧವಿಲ್ಲ. ನನ್ನ ಬಳಿ ಯಾರೂ ರೆಕಮೆಂಡೇಶನ್ ತರಬೇಡಿ. ನನಗೆ ನಿಮ್ಮ ಬೆಂಬಲ ಬೇಕು. ಎಲ್ಲರೂ ಸೇರಿ ಕೆಲಸ ಮಾಡೋಣ. ದೇವರು ಒಳ್ಳೆಯ ಅವಕಾಶ ಕೊಟ್ಟಿದ್ದಾನೆ ಎಂದು ಅಧಿಕಾರಿಗಳಿಗೆ ಸಚಿವ ಸಂತೋಷ್ ಲಾಡ್ ಕ್ಲಾಸ್ ತೆಗೆದುಕೊಂಡ ಘಟನೆ ನಡೆದಿದೆ.

ಇನ್ನು ಸಭೆಗೆ ಅಪೂರ್ಣ ಮಾಹಿತಿಯೊಂದಿಗೆ ಬಂದ್ ಅಧಿಕಾ–ರಿಗಳಿಗೆ ಕ್ಲಾಸ್ ತೆಗೆದುಕೊಂಡ ಲಾಡ್, ಕೃಷಿ ಇಲಾಖೆ ಹಾಗೂ ಹೆಸ್ಕಾಂನಿಂದ ಇರುವ ಬೋರವೆಲ್ ಕನೆಕ್ಷನ್ ಡಾಟಾ ಒಂದಕ್ಕೊಂದು ಲೆಕ್ಕ ಹೊಂದುತ್ತಿಲ್ಲ. ಅಧಿಕಾರಿಗಳು ಸಭೆಗೆ ಬರುವಾಗ ಸಂಪೂರ್ಣ ಮಾಹಿತಿ ತರಬೇಕು. ಅಧಿಕಾರಿಗಳೇ ನಮಗೆ ಮಾರ್ಗದರ್ಶನ ನೀಡಬೇಕು. ಅದನ್ನು ಬಿಟ್ಟು ನಾವು ಕೇಳಿದಾಗ ಹೇಳುವುದಲ್ಲ. ಕಾಟಾಚಾರಕ್ಕೆ ಯಾವುದೋ ಒಂದು ಪ್ರಿಂಟೌಟ್ ತರುವುದಲ್ಲ. ಇದು ಸೀರಿಯಸ್ ಪ್ರಾಬ್ಲಂ ಆಗಿದೆ ಎಂದರು.

ಇದೇ ವೇಳೆ ಜೆಜೆಎಂ ಕೆಲಸ ಎಲ್ಲೆಲ್ಲಿ ಅರ್ಧಕ್ಕೆ ನಿಂತಿದೆಯೋ ಅದನ್ನು ಪೂರ್ಣಗೊಳಿಸಬೇಕು. ರಸ್ತೆ ಹಾಳಾಗಿರುವುದರಿಂದ ಸಾರ್ವಜನಿಕ–ರಿಗೆ ಮಳೆಗಾಲದಲ್ಲಿ ಅಡ್ಡಾಡಲು ತೊಂದರೆಯಾಗುತ್ತದೆ. ಕೆಲಸ ಮುಗಿಯುವವರೆಗೂ ಬಾಕಿ ಬಿಲ್ ಬಿಡುಗಡೆ ಮಾಡಬೇಡಿ ಎಂದು ಜಿಲ್ಲಾ ಹಂತದ ಅಧಿಕಾರಿಗೆ ಸಚಿವ ಸಂತೋಷ್ ಲಾಡ್ ಅವರು ಫೋನ್‌ನಲ್ಲೇ ಸೂಚನೆ ನೀಡಿದರು.

## ತಾಲಿಬಾನ್ ಅಲ್ಲ, ಕರ್ನಾಟಕ ಎನ್ನುವುದನ್ನ ಮರೆಯಬಾರದು



ಬೆಂಗಳೂರು: ಚಕ್ರವರ್ತಿ ಸೂಲಿಬೆಲೆ ವಿರುದ್ಧ ಮಾತನಾಡಿದ್ದ ಕಾರಣಕ್ಕೆ ಎಂ.ಬಿ. ಪಾಟೀಲ್ ವಿರುದ್ಧ ಬಿಜೆಪಿ ನಾಯಕರು ಹೊಸ ಅಸ್ತ್ರ ಹೂಡಿದ್ದಾರೆ. ಆದರೆ ಅದೇ ಅಸ್ತ್ರವನ್ನ ಈಗ ಎಂ.ಬಿ. ಪಾಟೀಲ್ ಪ್ರತ್ಯಸ್ತ್ರ ಮಾಡಿಕೊಂಡು ವಾಪಸ್ ಕಮಲ ಪಾಳಯದ ಮೇಲೆ ಪ್ರಯೋಗ ಮಾಡುತ್ತಿದ್ದಾರೆ.

ಚಕ್ರವರ್ತಿ ಸೂಲಿಬೆಲೆ ಬಗ್ಗೆ ಎಂ.ಬಿ.ಪಾಟೀಲ್ ನೀಡಿದ್ದ ಹೇಳಿಕೆಗೆ ಎಚ್ಚರಿಕೆ ಕೊಡುವ ರೀತಿ ತಿರುಗಿಬಿದ್ದಿದೆ.

ಅದ್ರಲ್ಲೂ ಯತ್ನಾಳ್, ಎಂಬಿಪಿ ವಿರುದ್ಧ ತೀಕ್ಷ್ಣವಾಗಿ ಟ್ವೀಟ್ ಮಾಡಿದ್ರು. ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಟ್ವೀಟ್‌ನಲ್ಲಿ ಪ್ರಜಾಪ್ರಭುತ್ವದ ಬಗ್ಗೆಯೂ ಉಲ್ಲೇಖ ಮಾಡಿದ್ರು.

ಈಗ ಅದೇ ಟ್ವೀಟ್‌ಗೆ ತಕ್ಕ ತಿರುಗೇಟು ನೀಡಿರುವ ಎಂ.ಬಿ. ಪಾಟೀಲ್, ಕಳೆದ 4 ವರ್ಷ ಪ್ರಜಾಪ್ರಭುತ್ವ ಎಲ್ಲಿ ಹೋಗಿತ್ತು? ಎಂದು ಪ್ರಶ್ನೆ ಹಾಕಿ ಶಾಸಕ ಯತ್ನಾಳ್‌ಗೆ ಸವಾಲು ಎಸೆದಿದ್ದಾರೆ. ಇಬ್ಬರ ಟ್ವೀಟ್ ವಾರ್ ನಡುವೆ ತಾಲಿಬಾನ್ ಕೂಡ ಎಂಟ್ರಿಯಾಗಿದೆ!

**ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಇದು ನಡೆಯಲ್ಲ!**

ಮೊದಲಿಗೆ ಎಂ.ಬಿ.ಪಾಟೀಲ್ ವಿರುದ್ಧ ಟ್ವೀಟ್ ಮಾಡಿದ್ದ ಬಸನಗೌಡ ಪಾಟೀಲ್ ಯತ್ನಾಳ್, 'ಯಾರೇ ಮಾತಾಡಿದ್ರು ಜೈಲಿಗೆ ಹಾಕ್ತೀವಿ ಅಂತ ಹೇಳೋಕ್ಕೆ ಇದು ತಾಲಿಬಾನ್ ಆಡಳಿತ ಅಲ್ಲ, ಕರ್ನಾಟಕ ಎನ್ನುವುದನ್ನು ಅವರು ಮರೆಯಬಾರದು. ಮಾಡಿಸ್ತೀವಿ, ಜೈಲಿಗೆ ಕಳುಹಿಸ್ತೀವಿ ಪದೇ ಪದೇ ಅನ್ನುವುದಕ್ಕೆ ಇವರೇನು ನ್ಯಾಯಾಧೀಶರ? ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಇದೆಲ್ಲ ಸಲ್ಲದು, ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗು ಅವರ ಮಂತ್ರಿಗಳು ಆಗಬಾರದು!' ಎಂದಿದ್ದರು. ಈಗ ಅದೇ ಟ್ವೀಟ್‌ಗೆ ಎಂಬಿಪಿ ತಿರುಗೇಟು ನೀಡಿದ್ದಾರೆ.

## ಮನೆ ಇಲ್ಲದ ಬಡವರಿಗೆ ಗುಡ್ ನ್ಯೂಸ್




ಬೆಂಗಳೂರು: ಬಡವರಿಗೆ ರೂಪಿಸಿದ ವಸತಿ ಯೋಜನೆಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ವಸತಿ ಸಚಿವ ಜಮೀರ್ ಅಹ್ಮದ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಸತಿ ಇಲಾಖೆ ವ್ಯಾಪ್ತಿಗೆ ಬರುವ ರಾಜೀವ್ ಗಾಂಧಿ ವಸತಿ ನಿಗಮದ ಪ್ರಗತಿ ಪರಿಶೀಲನೆ ನಡೆಸಿದ ಅವರು, ಬಡವ–ರಿಗೆ ರೂಪಿಸಿದ ವಸತಿ ಯೋಜನೆಗೆ ನಿಗದಿತ ಕಾಲಮಿತಿ ಹಾಕಿಕೊಂಡು ಅದನ್ನು ಪೂರ್ಣಗೊಳಿಸಿದ ನಂತರ ಮತ್ತೊಂದು ಯೋಜನೆ ಕೈಗೆತ್ತಿಕೊಳ್ಳುವಂತೆ ತಿಳಿಸಿದ್ದಾರೆ.

ನಿಗದಿತ ಅವಧಿ ಒಳಗೆ ಯೋಜನೆ ಪೂರ್ಣಗೊಳ್ಳದಿದ್ದರೆ ಬಡವರಿಗೆ ವಸತಿ ಕಲ್ಪಿಸುವ ಉದ್ದೇಶ ಈಡೇರುವುದಿಲ್ಲ. ಹೀಗಾಗಿ ಕಾಲಮಿತಿಯೊಳಗೆ ಯೋಜನೆ ಜಾರಿಗೆ ಕ್ರಮ ಕೈಗೊಳ್ಳಬೇಕು. ವಿಳಂಬವನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಹೇಳಿದ್ದಾರೆ.

ಮುಖ್ಯಮಂತ್ರಿಗಳ ಒಂದು ಲಕ್ಷ ವಸತಿ ಕಲ್ಪಿಸುವ ಯೋಜನೆ ನೀರಿಕ್ಷಿತ ಮಟ್ಟದಲ್ಲಿ ಪ್ರಗತಿಯಾಗದಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಆರಂಭಿಕ ಹಣ ಪಾವತಿಸಿದ ಅರ್ಜಿದಾರರಿಗೆ, ಫಲಾನುಭವಿಗಳಿಗೆ ಇನ್ನೂ ಮನೆ ಕೊಟ್ಟಿಲ್ಲ. ಈ ನಿಟ್ಟಿನಲ್ಲಿ ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಹೇಳಿದ್ದಾರೆ.

## ಒಡಿಶಾ ರೈಲು ದುರಂತಕ್ಕೆ ಸಿಗ್ನಲ್ ವೈಫಲ್ಯ ಕಾರಣವಲ್ಲ: ತನಿಖಾಧಿಕಾರಿ



ಹೊಸದಿಲ್ಲಿ: ಒಡಿಶಾ ತ್ರಿವಳಿ ರೈಲು ದುರಂತದ ಕಾರಣಗಳ ಬಗ್ಗೆ ರೈಲ್ವೆ ಇಲಾಖೆಯ ವಿವಿಧ ವಿಭಾಗಗಳ ನಡುವೆ ಭಿನ್ನಾಭಿಪ್ರಾಯವಿದ್ದು, ಜಂಟಿ ತಪಾಸಣಾ ವರದಿಗೆ ಸಹಿ ಮಾಡಿದ ಹಿರಿಯ ರೈಲ್ವೆ ಎಂಜಿನಿಯರ್ ಒಬ್ಬರು ವರದಿಯ ಅಂಶಗಳಿಗೆ ತಮ್ಮ ವಿರೋಧ ವ್ಯಕ್ತಪಡಿಸುವ ಟಿಪ್ಪಣಿ ದಾಖಲಿಸಿದ್ದಾರೆ.

ಸಿಗ್ನಲ್ ವೈಫಲ್ಯ ದುರಂತಕ್ಕೆ ಕಾರಣ ಎಂದು ತಪಾಸಣಾ ವರದಿ ದೂರಿದೆ. ಆದರೆ ಇದನ್ನು ನಿರಾಕರಿಸಿರುವ ಅಧಿಕಾರಿ, ಡಾಟಾಲಾಗರ್ ವರದಿಯನ್ನು ಉಲ್ಲೇಖಿಸಿ ಕೋರಮಂಡಲ ಎಕ್ಸ್‌ಪ್ರೆಸ್ ರೈಲು ಮುಖ್ಯ ಹಳಿಯಲ್ಲಿ ಚಲಿಸಲು ಹಸಿರು ಸಿಗ್ನಲ್ ನೀಡಲಾಗಿತ್ತೇ ವಿನಃ ಲೂಪ್ ಲೈನ್ನಲ್ಲಿ ಚಲಿಸಲು ಸಿಗ್ನಲ್ ನೀಡಿರಲಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ತನಿಖೆಯ ಪ್ರಾಥಮಿಕ ಹಂತದಲ್ಲಿ ಭಿನ್ನ ದೃಷ್ಟಿಕೋನಗಳು ಇರುವುದರಿಂದ ವಿವಿಧ ವಿಭಾಗಗಳ ನಡುವೆ ಇಂಥ ಭಿನ್ನ ಅಭಿಪ್ರಾಯಗಳು ಸಾಮಾನ್ಯ ಎಂದು ರೈಲ್ವೆ ಸಚಿವಾಲಯ ಸಮುಜಾಯಿಷಿ ನೀಡಿದೆ. ರೈಲ್ವೆ ಸುರಕ್ಷತಾ ಆಯುಕ್ತರು ತನಿಖೆ ನಡೆಸಿ ವರದಿ ನೀಡುವ ವರೆಗೂ ಅಂತಿಮ ನಿರ್ಧಾರಕ್ಕೆ ಕಾಯಬೇಕಾಗುತ್ತದೆ ಎಂದು ಸಚಿವಾಲಯ ಹೇಳಿದೆ.

ಡಾಟಾಲಾಗರ್ ಎನ್ನುವುದು ಮೈಕ್ರೊಪ್ರೊಸೆಸರ್ ಆಧರಿತ ವ್ಯವಸ್ಥೆಯಾಗಿದ್ದು, ಇದು ರೈಲ್ವೆ ಸಿಗ್ನಲಿಂಗ್ ವ್ಯವಸ್ಥೆಯ ಮೇಲೆ ನಿಗಾ ಇಡುತ್ತದೆ. ಇದು ಈ ಮಾಹಿತಿಯನ್ನು ಸ್ಕ್ಯಾನ್ ಮಾಡಿ, ಸಂಗ್ರಹಿಸಿ ಇಟ್ಟು ಸಂಸ್ಕರಿಸುತ್ತದೆ. ಇದನ್ನು ವರದಿ ತಯಾರಿಸಲು ಬಳಸಲಾಗುತ್ತದೆ.

ಬಲಸೋರ್ನ ಸಿಗ್ನಲ್ ಹಾಗೂ ಸಂಪರ್ಕ ವಿಭಾಗದ ಹಿರಿಯ ಸೆಕ್ಷನ್ ಎಂಜಿನಿಯರ್ ಎ.ಕೆ. ಮಹಾಂತ, ತನಿಖಾ ತಂಡದಲ್ಲಿದ್ದ ಇತರ ನಾಲ್ಕು ಮಂದಿಯ ಅಭಿಪ್ರಾಯವನ್ನು ವಿರೋಧಿಸಿ ಒಂದು ಪುಟದ ಟಿಪ್ಪಣಿ ದಾಖಲಿಸಿದ್ದಾರೆ. ಕೋರಮಂಡಲ ಎಕ್ಸ್‌ಪ್ರೆಸ್ ರೈಲಿನ ಚಾಲಕನಿಗೆ ಲೂಪ್ಲೈನ್ನಲ್ಲಿ ತೆರಳಲು ಸಿಗ್ನಲ್ ನೀಡಿದ್ದ–ರಿಂದ ಅದು ಸ್ಟೇಷನರಿ ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆಯಿತು ಎಂದು ವರದಿಯಲ್ಲಿ ಹೇಳಲಾಗಿದೆ.

## ಮಧ್ಯಾಹ್ನದ ಊಟ ಸೇವಿಸಿ 35 ಸೈನಿಕರು ಅಸ್ವಸ್ಥ



ಹಾಸನ: ಮಧ್ಯಾಹ್ನದ ಊಟ ಸೇವಿಸಿದ ನಂತರ 35 ಸೈನಿಕರು ಅಸ್ವಸ್ಥರಾಗಿರುವಂತಹ ಘಟನೆ ಜಿಲ್ಲೆಯ ಸಕಲೇಶಪುರ ತಾಲೂಕಿನ ಕುಡುಗರಹಳ್ಳಿಯಲ್ಲಿ ನಡೆದಿದೆ.

ಸದ್ಯ ಅಸ್ವಸ್ಥ ಸೈನಿಕರಿಗೆ ಸಕಲೇಶಪುರ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ವಾಹನ ಚಾಲನಾ ತರಬೇತಿಗೆ ಸೈನಿಕರು ಬಂದು ಇಲ್ಲೇ ತಂಗಿದ್ದರು. ಮಧ್ಯಾಹ್ನ ಕ್ಯಾಂಪ್‌ನಲ್ಲೇ ತಯಾರಾದ ಆಹಾರ ಸೇವಿಸಿದ ಬಳಿಕ ಸೈನಿಕರು ಅಸ್ವಸ್ಥತೆಗೆ ಒಳಗಾಗಿದ್ದಾರೆ ಎನ್ನಲಾಗುತ್ತಿದೆ. ಸದ್ಯ ಆಸ್ಪತ್ರೆಗೆ ಶಾಸಕ ಸಿಮೆಂಟ್ ಮಂಜು ಭೇಟಿ ನೀಡಿದ್ದು, ಅಸ್ವಸ್ಥಗೊಂಡಿರುವ ಸೈನಿಕರ ಆರೋಗ್ಯ ವಿಚಾರಿಸಿದ್ದಾರೆ.

# ಆಗಸ್ಟ್ ನಿಂದ 200 ಯೂನಿಟ್ ಉಚಿತ ವಿದ್ಯುತ್ ಯೋಜನೆ ಅನುಷ್ಠಾನ

# ಜೂನ್ 15ರಿಂದ 'ಗೃಹ ಜ್ಯೋತಿ'ಗೆ ನೋಂದಣಿ ಆರಂಭ: ಕೆ.ಜೆ. ಜಾರ್ಜ್




ಬೆಂಗಳೂರು : ರಾಜ್ಯ ಸರ್ಕಾರದ ಮಹತ್ವದ ಯೋಜನೆಗಳಲ್ಲೊಂದಾದ ಸುಮಾರು 2.14 ಕೋಟಿ ಗೃಹ ಬಳಕೆ ಗ್ರಾಹಕರಿಗೆ 200 ಯೂನಿಟ್‌ಗಳ ಉಚಿತ ವಿದ್ಯುತ್ ಒದಗಿಸುವ 'ಗೃಹ ಜ್ಯೋತಿ' ಯೋಜನೆಯ ಲಾಭ ಪಡೆಯಲು ಜೂನ್ 15ರಿಂದ ನೋಂದಣಿ ಪ್ರಕ್ರಿಯೆ ಆರಂಭವಾಗಲಿದೆ.

'ಗೃಹ ಜ್ಯೋತಿ' ಉಚಿತ ವಿದ್ಯುತ್ ಯೋಜನೆ ಸಂಬಂಧ ಜೂನ್ 6 ರಂದು ಹೊರಡಿಸಿದ್ದ ಅಧಿಸೂಚನೆಯ ವಿವರ ನೀಡಲು ಬೆಸ್ಕಾಂ ಕೇಂದ್ರ ಕಚೇ–ರಿಯಲ್ಲಿ ಬುಧವಾರ ನಡೆಸಿದ ಮಾಧ್ಯಮ ಗೋಷ್ಠಿಯಲ್ಲಿ ಇಂಧನ ಸಚಿವ ಕೆ.ಜೆ ಜಾರ್ಜ್ ಈ ವಿಷಯ ಪ್ರಕಟಿಸಿದರು.

"ಇದೇ ತಿಂಗಳ 15ರಿಂದ ಕರ್ನಾಟಕ ಒನ್, ಬೆಂಗಳೂರು ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಲ್ಲಿ ನೋಂದಣಿ ಪ್ರಕ್ರಿಯೆ ಆರಂಭವಾಗಲಿದೆ. ಸೇವಾ ಸಿಂಧು ಪೋರ್ಟಲ್ ನಲ್ಲೂ 'ಗೃಹ ಜ್ಯೋತಿ' ಯೋಜನೆ ನೋಂದಣಿಗಾಗಿ ಪ್ರತ್ಯೇಕ ವಿಭಾಗ ತೆರೆಯಲಾಗುವುದು. ವೆಬ್ ಸೈಟ್, ಮೊಬೈಲ್ ಮೂಲಕ ಲಾಗಿನ್ ಆಗಿ ಸೂಕ್ತ ಮಾಹಿತಿ/ದಾಖಲೆ ಒದಗಿಸಿ ನೋಂದಣಿ ಮಾಡಿಸಬಹುದು," ಎಂದು ಸಚಿವರು ತಿಳಿಸಿದರು.

"ಮನೆ ಮಾಲೀಕರು, ಬಾಡಿಗೆದಾರರು ಸೇರಿದಂತೆ ಎಲ್ಲ ಅಧಿಕೃತ ಬಳಕೆದಾರ–ರಿಗೆ ಗೃಹ ಜ್ಯೋತಿ ಯೋಜನೆಯ ಲಾಭ ದೊರೆಯಲಿದೆ. ಆರ್ ಆರ್ ನಂಬರ್ ಜತೆ ಆಧಾರ್ ಸಂಖ್ಯೆ ಜೋಡಣೆ ಮಾಡುವುದು ಕಡ್ಡಾಯ. ಆಧಾರ್ ನಲ್ಲಿ ನಮೂದಿಸಿರುವ ವಿಳಾಸ ಬೇರೆಯಿದ್ದರೂ, ನಿರ್ದಿಷ್ಟ ವಿಳಾಸದಲ್ಲಿ ವಿದ್ಯುತ್ ಬಳಕೆದಾರರು ವಾಸವಿರುವ ಬಗ್ಗೆ ಪೂರಕ ದಾಖಲೆ ಒದಗಿಸಿ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸಬಹುದು," ಎಂದು ಜಾರ್ಜ್ ವಿವರಿಸಿದರು.

"2.14 ಕೋಟಿ ಗೃಹ ಬಳಕೆ ಗ್ರಾಹಕರ ಪ್ರತಿ ತಿಂಗಳ ವಿದ್ಯುತ್ ಬಳಕೆಯನ್ನು ಗಮನದಲ್ಲಿಟ್ಟುಕೊಂಡು ಒಂದು ವರ್ಷದ ಸರಾಸರಿ ಬಳಕೆಯನ್ನು ಅಂ–ದಾಜಿಸುವ ಪ್ರಕ್ರಿಯೆ ನಡೆದಿದೆ. ಸರಾಸರಿ ಬಳಕೆಯ ಯುನಿಟ್‌ಗೆ ಹೆಚ್ಚುವರಿಯಾಗಿ ಶೇ.10ರಷ್ಟನ್ನು ಸೇರಿಸಿ ಪ್ರತಿ ಮನೆಯ ತಿಂಗಳ ಸರಾಸರಿ ವಿದ್ಯುತ್ ಬಳಕೆಯ ಯೂನಿಟ್ ಗಳನ್ನು ನಿರ್ಧರಿಸಲಾಗುತ್ತದೆ. ಅದರಂತೆ ಬಳಕೆದಾರರ ವಿದ್ಯುತ್ ಶುಲ್ಕ ನಿರ್ಧರಿಸಲಾಗುತ್ತದೆ," ಎಂದರು.

"ಪ್ರತಿ ಮನೆಯಲ್ಲಿ ಬಳಕೆಯಾಗುವ ನಿಗದಿತ ಸರಾಸರಿ ವಿದ್ಯುತ್ ಯೂನಿಟ್ 200 ಯೂನಿಟ್‌ಗಳಿಗಿಂತ ಕಡಿಮೆ ಇದ್ದಲ್ಲಿ, ಗೃಹ ಬಳಕೆ ಗ್ರಾಹಕರು ಯಾವುದೇ ಶುಲ್ಕ ಪಾವತಿಸುವ ಅಗತ್ಯ ಇಲ್ಲ. ಒಂದು ವೇಳೆ ಸರಾಸರಿಗಿಂತ ಹೆಚ್ಚಿನ ಯೂನಿಟ್ ಬಳಕೆ ಮಾಡಿದ್ದಲ್ಲಿ ಹೆಚ್ಚುವರಿ ಯೂನಿಟ್ ಗೆ ಮಾತ್ರ ಶುಲ್ಕ ಪಾವತಿಸಬೇಕಾಗುತ್ತದೆ. ಆದರೆ, ನಿಗದಿತ 200 ಯೂನಿಟ್‌ಗಿಂತ ಹೆಚ್ಚು ಬಳಕೆಯಾದರೆ ಸಂಪೂರ್ಣ ಶುಲ್ಕ ಪಾವತಿಸಬೇಕಾಗುತ್ತದೆ," ಎಂದು ವಿವ–ರಿಸಿದರು.

"ಬೆಲೆ ಏರಿಕೆಯಿಂದ ತತ್ತರಿಸಿರುವ ಮಧ್ಯಮ ವರ್ಗದವರ ನೆರವಿಗಾಗಿ ಈ ಯೋಜನೆ ಜಾರಿಗೊಳಿಸಲಾಗುತ್ತಿದೆ. ಇದರಿಂದ ಸರ್ಕಾರಕ್ಕೆ ಹೊರೆ ಆಗುವುದಿಲ್ಲ. ದೀರ್ಘಾವಧಿಯಲ್ಲಿ ರಾಜ್ಯಕ್ಕೆ ಇದರಿಂದ ಲಾಭವಾಗಲಿದೆ. ಉಚಿತ ಘೋಷಣೆ ಲಾಭ ಪಡೆಯುವ ಕುಟುಂಬಗಳು ತಮ್ಮ ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಲು ಸಾಧ್ಯವಾಗುತ್ತದೆ.

ಇದರಿಂದ ಅವರಿಗೆ ಉತ್ತಮ ಉದ್ಯೋಗಾವಕಾಶಗಳು ಹೆಚ್ಚಲಿವೆ. ಈ ಮೂಲಕ ರಾಜ್ಯದ ಆರ್ಥಿಕತೆಯೂ ಉತ್ತಮಗೊಳ್ಳಲಿದೆ,"ಎಂದು ಸ್ಪಷ್ಟನೆ ನೀಡಿದರು.

ಮಾಧ್ಯಮ ಗೋಷ್ಠಿಯಲ್ಲಿ ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಾಂತೇಶ ಬೀಳಗಿ ಹಾಗೂ ಇಲಾಖೆಯ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಯೋಜನೆಯ ವಿವರಗಳು:**

–200 ಯೂನಿಟ್ ವರೆಗಿನ ವಿದ್ಯುತ್ ಬಳಸುವ ರಾಜ್ಯದ ಎಲ್ಲಾ ಗೃಹ ಬಳಕೆಯ ಗ್ರಾಹಕರಿಗೆ ಈ ಯೋಜನೆಯ ಲಾಭ ಸಿಗಲಿದೆ.

ರಾಜ್ಯದ ವಾಣಿಜ್ಯ ಬಳಕೆಯ ಗ್ರಾಹಕರಿಗೆ ಈ ಯೋಜನೆ ಅನ್ವಯಿಸುವುದಿಲ್ಲ.

–ಜುಲೈ ತಿಂಗಳ ವಿದ್ಯುತ್ ಬಳಕೆಯನ್ನ ಆಗಸ್ಟ್ ತಿಂಗಳಿಂದ ನೀಡುವ ಬಿಲ್ ಗೆ ಅನ್ವಯವಾಗುವಂತೆ ಯೋಜನೆಯನ್ನು ಕಾರ್ಯಗತಗೊಳಿಸಲಾಗುವುದು.

–ಗ್ರಾಹಕರು ಬಳಸುವ ತಿಂಗಳ ಗ–ರಿಷ್ಠ 200 ಯೂನಿಟ್ ವರೆಗಿನ ವಿದ್ಯುತ್ ಬಳಕೆಯಲ್ಲಿ 2022–2023 ಆರ್ಥಿಕ ವರ್ಷದ ಬಳಕೆಯ ಸರಾಸರಿ ಆದ–ಾರದಲ್ಲಿ ಯೂನಿಟ್ ಮೇಲೆ ಶೇ.10 ರಷ್ಟು ಹೆಚ್ಚಿನ ಬಳಕೆಯ ಮಿತಿಯನ್ನು ನಿಗದಿ ಪಡಿಸಿ ಯೋಜನೆಯನ್ನು ಜಾ–ರಿಗೊಳಿಸಲಾಗುತ್ತದೆ.

–ಗ್ರಾಹಕರ ಪ್ರತಿ ತಿಂಗಳ ವಿದ್ಯುತ್ ಬಳಕೆಯನ್ನು ರೀಡಿಂಗ್ ಮಾಡಿ, ಒಟ್ಟು ವಿದ್ಯುತ್ ಬಳಕೆ ಪ್ರಮಾಣಕ್ಕೆ ಬಿಲ್ ನೀಡಲಾಗುವುದು.

ಸರಾಸರಿ ಆಧಾರದ ಮೇಲೆ ಗ್ರಾಹಕರು ಬಳಸುವ ವಿದ್ಯುತ್ ಪ್ರಮಾಣದ ಮೊತ್ತವನ್ನು ಬಿಲ್ ನಲ್ಲಿ ಕಡಿತಗೊಳಿಸಿ ಸರಾಸರಿ ಪ್ರಮಾಣಕ್ಕಿಂತ ಹೆಚ್ಚಿನ ವಿದ್ಯುತ್ ಬಳಸಿದರೆ ಅಷ್ಟಕ್ಕೆ ಮಾತ್ರ ಬಿಲ್ ನೀಡಲಾಗುವುದು.( 200 ಯೂನಿಟ್ ಒಳಗಿದ್ದರೆ ಮಾತ್ರ)

–ನಿಗದಿ ಪಡಿಸಿದ ಸರಾಸರಿ ಪ್ರಮಾಣದ ವಿದ್ಯುತ್ ಬಳಸಿರೆ ಅಂತಹ ಗ್ರಾಹಕ–ರಿಗೆ ಶೂನ್ಯ ಬಿಲ್ ನೀಡಲಾಗುವುದು, ಅಂದರೆ ವಿದ್ಯುತ್ ಬಳಕೆ ಸರಾಸರಿ ಯೂನಿಟ್ ಒಳಗಿದ್ದರೆ, ಗ್ರಾಹಕರು ಬಿಲ್ ಪಾವತಿಸಬೇಕಾಗಿಲ್ಲ.

–ಗ್ರಾಹಕರ ಮಾಸಿಕ ಸರಾಸರಿ ವಿದ್ಯುತ್ ಬಳಕೆ 200 ಯೂನಿಟ್ ಮೀರಿದರೆ ಅವರಿಗೆ ಯೋಜನೆಯ ಪ್ರಯೋಜನ ಸಿಗುವುದಿಲ್ಲ.

ಯೋಜನೆಯ ಸೌಲಭ್ಯ ಪಡೆಯಲಿಚ್ಛಿಸುವ ಗ್ರಾಹಕರು ಸೇವಾ ಸಿಂಧು ಪೋರ್ಟಲ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು.

–ಗ್ರಾಹಕರ Customer ID/ Ac-count ID ಯನ್ನು ಗ್ರಾಹಕರ ಆಧಾರ್ ಗೆ ಕಡ್ಡಾಯವಾಗಿ ಜೋಡಣೆ ಮಾಡಬೇಕು.

–ಈಗಾಗಲೇ ಜಾರಿಯಲ್ಲಿರುವ ಭಾಗ್ಯ ಜ್ಯೋತಿ/ ಕುಟಿರ ಜ್ಯೋತಿ ಮತ್ತು ಅಮೃತ ಜ್ಯೋತಿ ಯೋಜನೆಯ ಫಲಾನುಭವಿ ಗ್ರಾಹಕರನ್ನು ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಸೇರ್ಪಡೆಗೊಳಿಸಲಾಗುವುದು.

–ಗ್ರಾಹಕರು ತಮ್ಮ ಹಿಂಬಾಕಿಯನ್ನು ಮೂರು ತಿಂಗಳ ಒಳಗೆ ಪಾವತಿಸದಿದ್ದರೆ, ಅವರ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗುವುದು.

ಯೋಜನೆ ಜಾರಿಗೆ ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

–ಯೋಜನೆಗೆ ಆಗತ್ಯವಿರುವ ಸಹಾಯಧನದ ಮೊತ್ತ ಮತ್ತು ಇಂಧನ ಮತ್ತು ವಿದ್ಯುತ್ ಖರೀದಿ ವೆಚ್ಚದ ಹೊಂದಾಣಿಕೆ ಶುಲ್ಕದ ಸಹಾಯಧನ ಮೊತ್ತವನ್ನು ಎಲ್ಲಾ ಎಸ್ಕಾಂಗಳಿಗೆ ಸರಕಾರ ಮುಂಗಡವಾಗಿ ಪಾವತಿಸಲಿದೆ.

## ಜೈಲಿಗೆ ಕಳಿಸಿದಕ್ಕೆ ಶಾಸಕನಾದೆ, ಗೆದ್ದು ಸುಧಾಕರ್ ರಾಜಕೀಯ ಜೀವನ ಮುಗಿಸಿದೆ: ಪ್ರದೀಪ್ ಈಶ್ವರ್



ಚಿಕ್ಕಬಳ್ಳಾಪುರ: ನನ್ನನ್ನು ಜೈಲಿಗೆ ಕಳುಹಿಸಿದ್ದಕ್ಕೆ ಎಂ–ಎಲ್ಎ ಆಗಿಬಿಟ್ಟೆ. ಐದು ವರ್ಷಗಳ ಪಟ್ಟ ಕಷ್ಟವನ್ನು ಸಹಿಸಿಕೊಂಡು, ಈಗ ಚುನಾವಣೆಯಲ್ಲಿ ಗೆದ್ದು ಸುಧಾಕರ್ ಅವರ ರಾಜ–ಕೀಯ ಜೀವನವನ್ನು ಮುಗಿಸಿದ್ದೇನೆ. ಆದ–ರೆ ದ್ವೇಷವನ್ನು ಸಕಾರಾತ್ಮಕವಾಗಿ ತೆಗೆದುಕೊಳ್ಳಲ್ಲ ಎಂದು ಶಾಸಕ ಪ್ರದೀಪ್ ಈಶ್ವರ್ ಹೇಳಿದರು.

ನಗರದ ಹರ್ಷೋದಯ ಕಲ್ಯಾಣ ಮಂಟಪದಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಕೃತಜ್ಞತಾ ಸಮಾವೇಶದಲ್ಲಿ ಮಾತನಾಡಿದ ಅವರು, ರಾಜ–ಕೀಯದಲ್ಲಿ ದ್ವೇಷ ಬೇಡ.

ಕೇಸ್ ಹಾಕಿಸಿ ಜೈಲಿಗೆ ಕಳುಹಿಸುವುದು ಸುಲಭ. ಆದರೆ ಸಾಕಷ್ಟು ಜನರು ಅದನ್ನೇ ಸೇಡಾಗಿ ತೆಗ್ದುಕೊಳ್ಳುತ್ತಾರೆ. ಇನ್ನಷ್ಟು ಅಪರಾಧಗಳಿಗೆ ಕಾರಣವಾಗುತ್ತಾರೆ.

ಆದರೆ ನಾನು ನನ್ನನ್ನು ಜೈಲಿಗೆ ಹಾಕಿಸಿದ್ದನ್ನೇ ಸವಾಲಾಗಿ ಸ್ವೀಕರಿಸಿ ಕಷ್ಟವನ್ನು ಸಹಿಸಿಕೊಂಡು ಈಗ ಶಾಸಕನಾಗಿದ್ದೇನೆ ಎಂದರು.


ಐದು ವರ್ಷಗಳ ಹಿಂದೆ ಅವರ ಸಂಸ್ಥೆಯಲ್ಲಿ ಶಿಕ್ಷಣ ಪಡೆದ ಎಂಬ ಕಾರಣಕ್ಕೆ ಅವರ ಪರವಾಗಿ ಕೆಲಸ ಮಾಡಿದ್ದೆ.

ಚುನಾವಣೆ ಯಲ್ಲಿ ಅವರನ್ನು ಗೆಲ್ಲಿಸಿಕೊಳ್ಳಲು ಪ್ರಯತ್ನ ಪಟ್ಟೆ. ಎಲೆಕ್ಷನ್ ಮುಗಿಯಿತು ಅವರು ಬಿಎಂಟಿಸಿ ಉಪಾಧ್ಯಕ್ಷರಾದರು.

ಆದರೆ ಈ ಗಲಾಟೆಯಲ್ಲಿ ಮೃತಪಟ್ಟ ನವೀನ್ ಅವರ ಕುಟುಂಬ ಬೀದಿಗೆ ಬಿತ್ತು.

ಅವರ ಕುಟುಂಬಕ್ಕೆ ಯಾರೂ ನೆರವಿಗೆ ಹೋಗಲಿಲ್ಲ ಎಂದು ಕೆ.ವಿ.ನವೀನ್ ಕಿರಣ್ ವಿರುದ್ಧ ಪರೋಕ್ಷವಾಗಿ ಕಿಡಿ ಕಾರಿದರು.

## ವೈದ್ಯರ ನಿರ್ಲಕ್ಷ್ಯದಿಂದ ಹೊಟ್ಟೆಯಲ್ಲೇ ಮಗು ಸಾವು



ಯಾದಗಿರಿ: ಯಾದಗಿರಿ ತಾಲೂಕಿನ ಹೊನಗೇರಾದಲ್ಲಿನ ಪ್ರಾಥಮಿಕ ಆಸ್ಪತ್ರೆಗೆ ಹೆ–ರಿಗೆಗೆಂದು ತೆರಳಿದ್ದ ಗರ್ಭಿಣಿಗೆ ಸೂಕ್ತ ಚಿಕಿತ್ಸೆ ದೊರೆಯದ ಹಿನ್ನೆಲೆ ಹೊಟ್ಟೆಯಲ್ಲಿಯೇ ಶಿಶು ಮೃತಪಟ್ಟಿರುವ ಘಟನೆ ನಡೆದಿದೆ.

ಆಶನಾಳ ಗ್ರಾಮದ ಗರ್ಭಿಣಿ ಲಕ್ಷ್ಮಿ ಎಂಬುವವರಿಗೆ ಸರಿಯಾದ ಚಿಕಿತ್ಸೆ ಸಿಗಲಿಲ್ಲ. ವೈದ್ಯರ ನಿರ್ಲಕ್ಷ್ಯದಿಂದಲೇ ಹೀಗೆ ಆಗಿದೆ ಎಂದು ಆರೋಪ ಮಾಡಲಾಗಿದೆ. ಮೊದಲಿಗೆ ಆಶಾ ಕಾರ್ಯಕರ್ತೆಯು ಇವರನ್ನು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದಿದ್ದರು. ಅಲ್ಲಿ ವೈದ್ಯರು ಇರದ ಹಿನ್ನೆಲೆಯಲ್ಲಿ ಯಾದಗಿರಿ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾರೆ ಎನ್ನಲಾಗಿದೆ. ಸೋಮವಾರ ರಾತ್ರಿ ಗರ್ಭಿಣಿ ಲಕ್ಷ್ಮಿಯ ಸ್ಕ್ಯಾನಿಂಗ್ ಮಾಡಿಸಿದಾಗ ಹೊಟ್ಟೆಯಲ್ಲಿ ಶಿಶು ಮೃತಪಟ್ಟಿದ್ದ ಬಗ್ಗೆ ತಿಳಿದುಬಂದಿದೆ. ಕೊನೆಗೆ ಮೃತ ಶಿಶುವನ್ನು ಶಸ್ತ್ರಚಿಕಿತ್ಸೆ ಮೂಲಕ ವೈದ್ಯರು ಹೊರ ತೆಗೆದಿದ್ದಾರೆ. ಬಳಿಕ ಬಾಣಂತಿ ಲಕ್ಷ್ಮಿಗೆ ಅಗತ್ಯ ಚಿಕಿತ್ಸೆ ನೀಡಲಾಗಿದೆ.

ವೈದ್ಯರ ನಿರ್ಲಕ್ಷ್ಯತನದಿಂದ ಶಿಶು ಮೃತಪಟ್ಟಿದೆ ಎಂದು ಕುಟುಂಬಸ್ಥರು ಆರೋಪ ಮಾಡಿದ್ದಾರೆ. ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವೈದ್ಯರು ಬಾರದೆ ನಿರ್ಲಕ್ಷ್ಯ ಮಾಡಿದ್ದಾರೆಂದು ಆರೋಪಿಸಿದ್ದಾರೆ. ಆರೋಗ್ಯ ಅಧಿಕಾರಿಗಳನ್ನು ತರಾಟೆ ತೆಗೆದುಕೊಂಡ ಕುಟುಂಬಸ್ಥರು, ಸೂಕ್ತ ನ್ಯಾಯ ಕೊಡಿಸುವಂತೆ ಒತ್ತಾಯಿಸಿದ್ದಾರೆ. ಅಲ್ಲದೇ ತಪ್ಪಿತಸ್ಥ ವೈದ್ಯರ ಮೇಲೆ ಯಾಕೆ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂದು ಆಕ್ರೋಶ ಹೊರಹಾಕಿದ್ದಾರೆ. ಘಟನೆಯಿಂದ ರೊಚ್ಚಿಗೆದ್ದ ಗ್ರಾಮಸ್ಥರು ಯಾದಗಿರಿ ಜಿಲ್ಲಾಸ್ಪತ್ರೆ ಎದುರು ಪ್ರತಿಭಟನೆ ನಡೆಸಿ, ಸೂಕ್ತ ನ್ಯಾಯಕ್ಕಾಗಿ ಒತ್ತಾಯಿಸಿದ್ದಾರೆ.

ವಿಷಯ ತಿಳಿದ ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರು ಆಸ್ಪತ್ರೆಗೆ ಭೇಟಿ ನೀಡಿ ಸಮಸ್ಯೆ ಆಲಿಸಿದ್ದಾರೆ. ಈ ವೇಳೆ ಶಾಸಕರ ಮುಂದೆ ಗ್ರಾಮಸ್ಥರು ನೋವು ತೋಡಿಕೊಂಡಿದ್ದಾರೆ. ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರು ಅವರು ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳುವ ಭರವಸೆ ನೀಡಿ ಗ್ರಾಮಸ್ಥರನ್ನು ಸಮಾಧಾನ ಪಡಿಸಿದ್ದಾರೆ.

## ಪತ್ನಿಯನ್ನ ಕೊಲೆ ಮಾಡಿ ತಾನೂ ಆತ್ಮಹತ್ಯೆ ಮಾಡಿಕೊಂಡ ಪತಿ



ಹಾವೇರಿ: ಹೆಂಡತಿಯನ್ನು ಬರ್ಬರವಾಗಿ ಕೊಲೆ ಮಾಡಿದ ಪತಿ ತಾನೂ ನೇಣಿಗೆ ಶರಣಾಗಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಹಾವೇರಿ ತಾಲೂಕಿನ ಸಂಗೂರು ಗ್ರಾಮದಲ್ಲಿ ನಡೆದಿದೆ.

ದ್ರಾಕ್ಷಾಣೆವ್ವ (45) ಎಂಬಾಕೆಯನ್ನು ಆಕೆಯ ಪತಿ ಪ್ರಭು ವಾರತಿ (52) ಎಂಬಾತ ಕೊಲೆ ಮಾಡಿ ಬಳಿಕ ತಾನೂ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಈತ ತನ್ನ ಹೆಂಡತಿಯ ಮೇಲೆ ಅನುಮಾನ ಪಡುತ್ತಿದ್ದ ಕಾರಣ ಪ್ರತಿದಿನ ಮನೆಯಲ್ಲಿ ಜಗಳ ಮಾಡಿಕೊಳ್ಳುತ್ತಿದ್ದರು ಎನ್ನಲಾಗಿದೆ.

ಮಂಗಳವಾರ ಇದೇ ರೀತಿ ಜಗಳ ಆಡುತ್ತಿದ್ದ ಸಂದರ್ಭ ಇವರ ಜಗಳ ಅತಿರೇಕಕ್ಕೆ ಹೋಗಿ ಇಬ್ಬರ ನಡುವೆ ಹೊಡೆದಾಟ ಪ್ರಾರಂಭವಾಗಿದೆ. ಈ ವೇಳೆ ಗಂಡ ಮಚ್ಚಿನಿಂದ ಹೆಂಡತಿಯನ್ನು ಹತ್ಯೆ ಮಾಡಿದ್ದು, ಬಳಿಕ ತಾನೂ ಮನೆಯ ಮುಂದೆ ನೇಣಿಗೆ ಶರಣಾಗಿದ್ದಾನೆ. ಸತಿ–ಪತಿಯ ಸಾವಿನಿಂದ ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ. ಹಾವೇರಿ ಗ್ರಾಮೀಣ ಠಾಣಾಯಲ್ಲಿ ಪ್ರಕರಣ ದಾಖಲಾಗಿದೆ.

## ಸಿಇಟಿ: ಆರ್ .ಡಿ ಸಂಖ್ಯೆ ತಿದ್ದುಪಡಿಗೆ ಮತ್ತೊಂದು ಅವಕಾಶ

ಬೆಂಗಳೂರು: ಸಿಇಟಿ ಪರೀಕ್ಷೆ ಬರೆದಿರುವ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿರುವ ಜಾತಿ/ಆದಾಯ/ಕಲ್ಯಾಣ ಕರ್ನಾಟಕ ಪ್ರಮಾಣ ಪತ್ರಗಳ ಆರ್ಡಿ ಸಂಖ್ಯೆಯನ್ನು ಕಂದಾಯ ಇಲಾಖೆಯ ಆರ್ .ಡಿ ಸಂಖ್ಯೆ ಜತೆ ನಮೂದಿಸುವ ಪ್ರಕ್ರಿಯೆ ಈಗ ನಡೆಯುತ್ತಿದೆ. ಆದರೆ, ಸಾವಿರಾರು ಅಭ್ಯರ್ಥಿಗಳ ಈ ಸಂಖ್ಯೆಗಳು ನಾನಾ ಕಾರಣಗಳಿಗಾಗಿ ತಾಳೆಯಾಗದೆ ಇರುವ ಹಿನ್ನೆಲೆಯಲ್ಲಿ ಸೂಕ್ತ ತಿದ್ದುಪಡಿಗೆ ಜೂನ್ 7ರ ಸಂಜೆ 4 ಗಂಟೆಯಿಂದ ಜೂನ್ 12ರ ಬೆಳಿಗ್ಗೆ 11 ಗಂಟೆಯವರೆಗೆ ಮತ್ತೊಮ್ಮೆ ಅವಕಾಶ ನೀಡಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯ ನಿರ್ವಾಹಕ ನಿರ್ದೇಶಕಿ ಎಸ್.ರಮ್ಯಾ ತಿಳಿಸಿದ್ದಾರೆ.

ಈ ಬಗ್ಗೆ ಬುಧವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ಆರ್ಡಿ ಸಂಖ್ಯೆಗಳು ತಿರಸ್ಕೃತಗೊಂಡಿರುವ ಅಭ್ಯರ್ಥಿಗಳ ಹೆಸರುಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. ಪರಿಶೀಲನಾ ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳ ಹೆಸರು ಅಥವಾ ನಮೂದಿಸಿರುವ ಜಾತಿಯಲ್ಲಿ ವ್ಯತ್ಯಾಸ, ಪ್ರಮಾಣಪತ್ರ ಚಾಲ್ತಿಯಲ್ಲಿ ಇಲ್ಲದಿರುವುದು, ಅಭ್ಯರ್ಥಿಗಳ ಹೆಸರಿನಲ್ಲಿ ಪ್ರಮಾಣಪತ್ರ ಇಲ್ಲದಿರುವುದು ಅಥವಾ ನಿಗದಿತ ನಮೂನೆಗಳಲ್ಲಿ ಈ ಪ್ರಮಾಣಪತ್ರ ಪಡೆಯದೆ ಇರುವ ಕಾರಣಗಳಿಂದ ಹೀಗಾಗಿರುತ್ತದೆ. ಆದ್ದರಿಂದ, ಅಭ್ಯರ್ಥಿಗಳ ಹಿತದೃಷ್ಟಿಯಿಂದ ಪ್ರಾಧಿಕಾರದ ಪೋರ್ಟಲ್ ತೆರೆಯಲಾಗುತ್ತಿದೆ" ಎಂದು ಮಾಹಿತಿ ನೀಡಿದರು.

**ಅಂಕ ದಾಖಲಿಸಲು ಅವಕಾಶ:**

ಸಿಬಿಎಸ್‌ಇ, ಸಿಐಎಸ್‌ಸಿಇ, 10+2, ಐಜಿಸಿ–ಎಸ್‌ಇ ಮುಂತಾದ ಪಠ್ಯಕ್ರಮಗಳಲ್ಲಿ 12ನೇ ತರಗತಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಮತ್ತು ಕರ್ನಾಟಕ ಪಠ್ಯಕ್ರಮದಲ್ಲಿ 2023ಕ್ಕೆ ಮೊದಲೇ ದ್ವಿತೀಯ ಪಿಯುಸಿ ಮುಗಿಸಿರುವ ವಿದ್ಯಾರ್ಥಿಗಳು ಕೂಡ ತಮ್ಮ ಅಂಕಗಳ ವಿವರ ದಾಖಲಿಸಲು ಸಹ ಜೂನ್ 7ರ ಸಂಜೆ 4 ಗಂಟೆಯಿಂದ ಜೂನ್ 9ರ ಸಂಜೆ 6ರವರೆಗೆ ಪ್ರಾಧಿಕಾರದ ಪೋರ್ಟಲ್ ಅನ್ನು ಮತ್ತೊಮ್ಮೆ ತೆರೆಯಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಟರ್ ಟ್ರ್ಯಕ್ಟರ್ ಹರಿದು 4 ವರ್ಷದ ಮಗು ಸಾವು




ಆನೇಕಲ್: ವಾಟರ್ ಟ್ರ್ಯಕ್ಟರ್ ಚಾಲಕನ ನಿರ್ಲಕ್ಷ್ಯಕ್ಕೆ 4 ವರ್ಷದ ಮಗು ಬಲಿಯಾಗಿರುವ ದಾರುಣ ಘಟನೆ ಬೆಂಗಳೂರು ಹೊರವಲಯದ ಬನ್ನೇರುಘಟ್ಟ ಸಮೀಪದ ಸಿ ಕೆ ಪಾಳ್ಯದಲ್ಲಿ ನಡೆದಿದೆ. ವಾಟರ್ ಟ್ಯಾಂಕರ್ ಚಕ್ರಕ್ಕೆ ಸಿಲುಕಿದ ಬಾಲಕ ಭುವನ್ ಸಾವನ್ನಪ್ಪಿದ್ರೆ, ಪೋಷಕರ ಆಕ್ರಂದನ ಮುಗಿಲು ಮುಟ್ಟಿದೆ.

4 ವರ್ಷದ ಭುವನ್ ತನ್ನ ಅಣ್ಣನ ಜೊತೆ ಬೇಕರಿಯಲ್ಲಿ ಐಸ್‌ಕ್ರೀಮ್ ತೆಗೆದುಕೊಂಡು ಬರುವಾಗ ಈ ಘಟನೆ ನಡೆದಿದೆ. ವಾಟರ್ ಟ್ಯಾಂಕರ್ ಚಾಲಕ ಕುಡಿದ ಮತ್ತಿನಲ್ಲಿ ಟ್ರ್ಯಕ್ಟರ್ ಓಡಿಸುತ್ತಿದ್ದ ಎನ್ನಲಾಗಿದೆ. ಅಪಘಾತದ ಬಳಿಕ ಕಿರಾತಕ ಚಾಲಕ ವಾಟರ್ ಟ್ಯಾಂಕರ್ ಬಿಟ್ಟು ಪರಾರಿಯಾಗಿದ್ದಾನೆ.

ಬಾಲಕನನ್ನು ಬಲಿ ಪಡೆದ ಟ್ರ್ಯಕ್ಟರ್‌ನ ಅಪಘಾತದ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಈ ಅಪಘಾತದ ನಿಜಕ್ಕೂ ಭಯಾನಕವಾಗಿದ್ದು, ಬನ್ನೇರುಘಟ್ಟ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಆನೇಕಲ್ ಸಮೀಪ ವಾಟರ್ ಟ್ಯಾಂಕರ್‌ಗಳ ಹಾವಳಿ ಮಿತಿ ಮೀ–ರಿದ್ದು, ಬಹಳಷ್ಟು ದೂರುಗಳು ಕೇಳಿ ಬಂದಿವೆ.

## ಲಖನೌ ಕೋರ್ಟ್‌ನಲ್ಲಿ ಗ್ಯಾಂಗ್ಸ್ಟರ್ ಮುಖ್ತಾರ್ ಅನ್ಸಾರಿ ಆಪ್ತ ಸಂಜೀವ್ ಜೀವಾಗೆ ಗುಂಡಿಕ್ಕಿ ಬರ್ಬರ ಹತ್ಯೆ



ಲಖನೌ ನ ಕೈಸರ್‌ಬಾಗ್‌ನಲ್ಲಿರುವ ಪಾಸ್ಕೋ ಕೋರ್ಟ್‌ನ ಗೇಟ್‌ನಲ್ಲಿ ವಕೀಲರ ಉಡ–ಪಿಯಲ್ಲಿದ್ದ ದುಷ್ಕರ್ಮಿಯೊಬ್ಬ ಗ್ಯಾಂಗ್ಸ್ಟರ್ ಮುಖ್ತಾರ್ ಅನ್ಸಾರಿ ಆಪ್ತ ಸಂಜೀವ್ ಜೀವಾ ಗುಂಡು ಹಾರಿಸಿ ಹತ್ಯೆ ಮಾಡಿದ್ದಾನೆ.

ಈ ವೇಳೆ ಓರ್ವ ಪೊಲೀಸ್ ಪೇದೆ ಹಾಗೂ ಒಂದು ಹೆಣ್ಣು ಮಗುವಿಗೆ ಸಹ ಗುಂಡು ತಗುಲಿದೆ.

ಸಂಜೀವ್ ಜೀವಾ, ಕೃಷ್ಣಾನಂದ ರೈ ಹತ್ಯೆ ಪ್ರಕರಣದ ಆರೋಪಿಯಾಗಿದ್ದು, ಮುನ್ನಾ ಬಜರಂಗಿ ಮತ್ತು ಮುಖ್ತಾರ್ ಅನ್ಸಾರಿಗೆ ಆಪ್ತನಾಗಿದ್ದ ಎನ್ನಲಾಗಿದೆ.

ನ್ಯಾಯಾಲಯದ ಆವರಣದಲ್ಲಿ ಹಗಲು ಹೊತ್ತಿನಲ್ಲಿ ಸಂಜೀವ್ ಜೀವಾ ಮೇಲೆ ಗುಂಡು ಹಾರಿಸಲಾಗಿದ್ದು, ಆತ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ.

ಲಕ್ನೋ ಕೋರ್ಟ್ ಕ್ಯಾಂಪಸ್‌ಗೆ ಸಂಬಂಧಿಸಿದಂತೆ ದುಷ್ಕರ್ಮಿಗಳ ಈ ದಾಳಿಯಿಂದಾಗಿ ಮತ್ತೆ ಸಂಚಲನ ಮೂಡಿದೆ. ಪ್ರಯಾಗರಾಜ್ ಹತ್ಯಾಕಾಂಡದ ಸುಮಾರು ನಾಲ್ಕು ತಿಂಗಳ ನಂತರ, ಈ ಹತ್ಯಾಕಾಂಡವು ಸಂಚಲನವನ್ನು ಸೃಷ್ಟಿಸಿದೆ.

ವಕೀಲರ ಸೋಗಿನಲ್ಲಿ ಬಂದ ಕ್ರಿಮಿನಲ್‌ಗಳು ಕೊಲೆ ಮಾಡಿದ್ದಾರೆ ಎಂದು ಹೇಳಲಾಗುತ್ತಿದೆ. ಆರೋಪಿಯನ್ನು ಹಿಡಿದು ಪೊಲೀಸರು ಕೇಸರಬಾಗ್ ಠಾಣೆಗೆ ಕರೆದೊಯ್ದಿದ್ದಾರೆ ಎನ್ನಲಾಗಿದೆ.

ಗಾಯಗೊಂಡಿರುವ ಬಾಲಕಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಆಕೆಯ ಸ್ಥಿತಿ ಗಂಭೀರವಾಗಿದೆ ಎನ್ನಲಾಗಿದೆ.

ಸಂಜೀವ್ ಜೀವಾ ಮುಜಾಫರ್‌ನಗರ ನಿವಾಸಿಯಾಗಿದ್ದು ಮುಖ್ತಾರ್ ಅನ್ಸಾರಿ, ಮುನ್ನಾ ಬಜರಂಗಿ ಮತ್ತು ಭಾಟಿ ಗ್ಯಾಂಗ್‌ಗಾಗಿ ಕೆಲಸ ಮಾಡುತ್ತಿದ್ದನು. ಈತನ ವಿರುದ್ಧ ಸುಮಾರು ಮೂರು ಡಜನ್ ಪ್ರಕರಣಗಳು ದಾಖಲಾಗಿವೆ ಎನ್ನಲಾಗಿದೆ.

ಸಂಜೀವ್ ಜೀವಾ ಅವರ ಪತ್ನಿ ಪಾಯಲ್ ಮಹೇಶ್ವರಿ ಕೆಲವು ದಿನಗಳ ಹಿಂದೆ ತನ್ನ ಪತಿಗೆ ಜೀವ ಬೆದರಿಕೆಯನ್ನು ತಿಳಿಸಿ ಭದ್ರತೆಗಾಗಿ ಮನವಿ ಮಾಡಿದ್ದರು.

ಇದಾದ ಬಳಿಕ ಅವರ ಭದ್ರತೆಯನ್ನೂ ಹೆಚ್ಚಿಸಲಾಗಿತ್ತು. ಆದರೆ ನ್ಯಾಯಾಲಯದ ಒಳಗೆ ದಾಳಿ ನಡೆಸಿರುವುದು ಆತಂಕವನ್ನುಂಟು ಮಾಡಿದೆ.

ಲಖನೌ ಕೋರ್ಟ್ ಕ್ಯಾಂಪಸ್‌ನಲ್ಲಿ ನಡೆದ ದಾಳಿಯಲ್ಲಿ ಇಬ್ಬರು ಯೋಧರು ಗಾಯಗೊಂಡಿದ್ದಾರೆ.

ಇದರಲ್ಲಿ ಒಬ್ಬರ ಹೆಸರು ಲಾಲ್ ಮೊಹಮ್ಮದ್ ಎಂದು ಹೇಳಲಾಗಿದೆ.

ಕೃಷ್ಣಾನಂದ ರೈ ಹತ್ಯೆ ಪ್ರಕರಣದಲ್ಲಿ ಸಂಜೀವ್ ಭಾಟಿ ಎಷ್ಟರ ಮಟ್ಟಿಗೆ ಶಾಮೀಲಾಗಿದ್ದನೆಂದರೆ ಅಂದಿನ ಶಾಸಕರ ಕಾರನ್ನು ಹತ್ತಿಸಿ ಎಕೆ 47 ನಿಂದ 27 ಗುಂಡುಗಳನ್ನು ಹಾರಿಸಿದ್ದರು ಎನ್ನಲಾಗಿದೆ.

ಇದರಲ್ಲಿ ಕೃಷ್ಣಾನಂದ ರೈ ಸೇರಿದಂತೆ ಹಲವರು ಸಾವಿಗೀಡಾಗಿದ್ದರು.

ಕೃಷ್ಣಾನಂದ ರೈ ಹತ್ಯೆ ಪ್ರಕರಣದಲ್ಲಿ ಮುಕ್ತಾರ್ ಅನ್ಸಾರಿ ಸೇರಿದಂತೆ ಹಲವರು ಶಿಕ್ಷೆಗೆ ಗು–ರಿಯಾಗಿದ್ದಾರೆ.

## ಹಿಂದುಳಿದ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಗೆ ಕಾನೂನು ತರಬೇತಿ ನೀಡಲು ಅರ್ಜಿ ಅಹ್ವಾನ

ಬೆಳಗಾವಿ: ಬೆಳಗಾವಿಯಲ್ಲಿ 2023–24 ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಹಿಂದುಳಿದ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವತಿಯಿಂದ ಕಾನೂನು ತರಬೇತಿ ನೀಡಲು ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಆಸಕ್ತ ಹಿಂದುಳಿದ ವರ್ಗಕ್ಕೆ ಸೇರಿದ ಕಾನೂನು ಪದವೀಧರರು ನಿಬಂಧನೆಗೆ ಒಳಪಟ್ಟು ಅರ್ಜಿಗಳನ್ನು ಬೆಳಗಾವಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾ ಅಧಿಕಾರಿಗಳಿಗೆ ಜೂ. 30 2023 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಅರ್ಹತೆ, ಷರತ್ತುಗಳು ಮತ್ತು ತರಬೇತಿಯ ವಿವರಗಳು: ತರಬೇತಿಯನ್ನು ಬೆಳಗಾವಿ ಜಿಲ್ಲೆಯಲ್ಲಿಯೇ ನೀಡಲಾಗುವುದು, ಬೆಳಗಾವಿ ಜಿಲ್ಲೆಯಲ್ಲಿ ಪ್ರಸ್ತುತ ಖಾಲಿ ಇರುವ ಒಟ್ಟು 12 ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು,

**ಆಯ್ಕೆ ಮಾಡಲಾಗುವ ಪ್ರವರ್ಗ ವಾರು ವಿವರ:**

ಪ್ರವರ್ಗ–2ಎ ಕ್ಕೆ 08, ಪ್ರವರ್ಗ–3ಎ ಗೆ 4, ಒಟ್ಟು 12 ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು, ಪ್ರವರ್ಗವಾರು ಅರ್ಜಿಗಳು ಬಾರದೇ ಇದ್ದಲ್ಲಿ ಪ್ರವರ್ಗ–1 ಮತ್ತು ಪ್ರವರ್ಗ–3ಬಿ ಅಭ್ಯರ್ಥಿಗಳಿಂದ ಬಂದ ಅರ್ಜಿಗಳಿಂದ ಪುನರಾವರ್ತಿತ ಮೀಸಲಾತಿಯಂತೆ ನಿಯಮಾನುಸಾರ ಪ್ರವರ್ಗ–1 ಮತ್ತು ಪ್ರವರ್ಗ–3ಬಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು,

ಸರ್ಕಾರದ ಆದೇಶ ಸಂಖ್ಯೆ ಎಸ್.ಡಬ್ಲ್ಯೂ.ಡಿ– 225/ಬಿ.ಸಿ.ಎ–2000 ಮಾ.30 2002 ರಲ್ಲಿ ವರ್ಗೀಕರಣ ಮಾಡಿರುವ ಪ್ರಕಾರ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಾಗಿರಬೇಕು, ಸರ್ಕಾರಿ ಆದೇಶ: ಎಸ್. ಡಬ್ಲ್ಯೂ.ಡಿ–222/ಬಿಸಿಎಮ್–94 ಸೆ. 24 1994 ರ ಆದೇಶದಲ್ಲಿ ಸರ್ಕಾರವು ನಿಗಧಿ ಪಡಿಸಿರುವ ನಮೂನೆಗಳಲ್ಲಿ ಜಾತಿ/ ಆದಾಯದ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು, ಹಿಂದುಳಿದ ವರ್ಗಗಳ ಪ್ರವರ್ಗ–1 ರ ಅಭ್ಯರ್ಥಿಗಳು ರೂ 3.50 ಲಕ್ಷ ಹಾಗೂ 2ಎ, 3ಎ, 3ಬಿ ಅಭ್ಯರ್ಥಿಗಳು ರೂ 2.50 ಲಕ್ಷ ಗಳ ಆದಾಯದ ಮಿತಿಯೊಳಗಿರಬೇಕು,

ತರಬೇತಿ ಅವಧಿಯು 4 ವರ್ಷಗಳಾಗಿದ್ದು, ಆಯ್ಕೆಯಾದ ಫಲಾನುಭವಿಗಳಿಗೆ ಪ್ರತಿ ಮಾಹೆ ಹಾಜರಾತಿ ಅನುಗುಣವಾಗಿ ರೂ 4000/–ಗಳ ತರಬೇತಿ ಭತ್ಯೆ (ಸ್ಟೈಪಂಡ್) ಮಂಜೂರು ಮಾಡಲಾಗುವುದು, ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟದ ಆಯ್ಕೆ ಸಮೀತಿಯಿಂದ ಸಂದರ್ಶನ ನಡೆಸಿ ಆಯ್ಕೆ ಮಾಡಲಾಗುವುದು, ಅರ್ಜಿಯ ಜೊತೆ ಎಸ್.ಎಸ್.ಎಲ್.ಸಿ. ಅಂಕ ಪಟ್ಟಿ, ಪದವಿ ಹಾಗೂ ಕಾನೂನು ಪದವಿಗಳ ಅಂಕ ಪಟ್ಟಿಗಳನ್ನು ದೃಡೀಕರಿಸಿ, ವಕೀಲರಾಗಿ ಪ್ರ್ಯಾಕ್ಟೀಸ್ ಮಾಡುತ್ತಿರುವ ಬಗ್ಗೆ ಪ್ರಮಾಣ ಪತ್ರಗಳನ್ನು ಲಗತ್ತಿಸತಕ್ಕದ್ದು, ಪ್ರವರ್ಗ–1 ರ ಅಭ್ಯರ್ಥಿಗಳಿಗೆ 40 ವರ್ಷ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ 38 ವರ್ಷ ಗ–ರಿಷ್ಠ ವಯೋಮಿತಿಯನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಮೀ–ರಿರಬಾರದು,

ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾ.ಸಿಕ್ಯೂಟರ್ ಸರ್ಕಾರಿ ವಕೀಲರು ಅಥವಾ ಕನಿಷ್ಠ 20 ವರ್ಷಗಳ ವಕೀಲಿ ವೃತ್ತಿಯಲ್ಲಿ ಅನುಭವವುಳ್ಳ ಯಾವುದೇ ವಕೀಲರ ಅಧೀನದಲ್ಲಿ ನಿಯೋಜಿಸಲಾಗುವುದು, ಅಭ್ಯರ್ಥಿಯು ಬಾರ್‌ಕೌನ್ಸಿಲ್‌ನಲ್ಲಿ ತಮ್ಮ ಹೆಸರನ್ನು ಕಡ್ಡಾಯವಾಗಿ ನೊಂದಾಯಿಸಿರಬೇಕು, ಅಭ್ಯರ್ಥಿಯು ತರಬೇತಿಗೆ ಅರ್ಜಿ ಸಲ್ಲಿಸಲು ನಿಗದಿ ಮಾಡಿದ ಕೊನೆಯ ದಿನಾಂಕದಿಂದ ಹಿಂದಿನ ಎರಡು ವರ್ಷಗಳಲ್ಲಿ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು,

ತರಬೇತಿ ಅವಧಿಯು 4 ವರ್ಷಗಳಾಗಿದ್ದು, ಮಧ್ಯಾವಧಿಯಲ್ಲಿ ತರಬೇತಿಯನ್ನು ನಿಲ್ಲಿಸಬಾರದು. ತರಬೇತಿಯ ಅವಧಿಯಲ್ಲಿ ರಾಜ್ಯ ಅಥ–ವಾ ಕೇಂದ್ರ ಸರ್ಕಾರದ ಸೇವೆಗೆ ಸೇರಿದ್ದಲ್ಲಿ, ಈ ಷರತ್ತು ಅನ್ವಯಿಸುವುದಿಲ್ಲ, ಅಭ್ಯರ್ಥಿಗಳು ಸುಳ್ಳು ಮಾಹಿತಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಜರುಗಿಸಲಾಗುವುದು ಅಲ್ಲದೇ ಅವರಿಗೆ ನೀಡಲಾದ ತರಬೇತಿ ಭತ್ಯೆಯನ್ನು ಶೇ. 10 ರ ಬಡ್ಡಿಯೊಂದಿಗೆ ವಸೂಲಿ ಮಾಡಲಾಗುವುದು, ಹಣ ಬಾಕಿ ಉಳಿದಲ್ಲಿ ಭೂ–ಕಂದಾಯ ವಸೂಲಿ ಮಾಡುವ ರೀತಿಯಲ್ಲಿ ಈ ಹಣವನ್ನು ವಸೂಲಿ ಮಾಡಲಾಗುವುದು, ಸದಸ್ಯ ಕಾರ್ಯದರ್ಶಿಗಳು ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲನೆ ಮಾಡಿ ಅಪೂರ್ಣಗೊಂಡಿರುವ ಹಾಗೂ ಕೇಳಿರುವ ಮಾಹಿತಿಯನ್ನು ಅರ್ಜಿಯೊಂದಿಗೆ ಒದಗಿಸಲು ವಿಫಲರಾದ ಮತ್ತು ಅವಧಿ ಮೀರಿ ಬಂದ ಅರ್ಜಿಗಳನ್ನು ಕಾರಣ ನೀಡದೇ ತಿರಸ್ಕರಿಸಲಾಗುವುದು,

ಅರ್ಜಿ ಸಲ್ಲಿಸಲು ಆಸಕ್ತ ಅಭ್ಯರ್ಥಿಗಳು ಪ್ರಕಟಣೆಯೊಂದಿಗೆ ಇರುವ ಅರ್ಜಿ ನಮುನೆಯಲ್ಲಿಯೇ ಜೂ.30 2023 ರೊಳಗೆ ಬೆಳಗಾವಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾ ಅಧಿಕಾರಿಗಳಿಗೆ ತಲಪುವಂತೆ ಅರ್ಜಿಗಳನ್ನು ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮತ್ತು ಅರ್ಜಿ ನಮೂನೆಗಳಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಡಿಸಿ ಆಫೀಸ್ ಕಂಪೌಂಡ್ ಬೆಳಗಾವಿಯ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಬೆಳಗಾವಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ವರ್ಗಕ್ಕೆ ಸೇರಿದ ಕಾನೂನು ಪದವೀಧರರಿಗೆ ಕಾನೂನು ತರಬೇತಿ ನೀಡಲು ಅರ್ಜಿ ಅಹ್ವಾನ

ಬೆಳಗಾವಿ: 2023–24ನೇ ಸಾಲಿಗೆ ಬೆಳಗಾವಿ ಜಿಲ್ಲೆಯ ಪರಿಶಿಷ್ಟ ವರ್ಗಕ್ಕೆ ಸೇರಿದ ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತದಲ್ಲಿ ತರಬೇತಿ ನೀಡುವ ಕುರಿತು ಮಾಸಿಕ ಸ್ಟೈಫಂಡ ಆಧಾರದ ಮೇಲೆ ಅರ್ಹ ಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಬೆಳಗಾವಿ ಜಿಲ್ಲೆಗೆ ಸಂಬಂಧಿಸಿದ ಹಾಗೂ ವಕೀಲ ವೃತ್ತಿ ನಡೆಸಲು ಅರ್ಹತೆಯುಳ್ಳ ಕಾನೂನು ಪದವೀಧರರು ಮಾತ್ರ ಈ ತರಬೇತಿಗೆ ಅರ್ಹರು, ಮಹಿಳಾ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು, ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು 40 ವರ್ಷಗಳನ್ನು ಮೀರಿರಬಾರದು. ಕುಟುಂಬ ವಾರ್ಷಿಕ ಆದಾಯ(ತಂದೆ/ತಾಯಿ ಸೇರಿ) 2.50 ಲಕ್ಷ ರೂ.ಗಳ ಒಳಗೆ ಇರಬೇಕು ಹಾಗೂ ತಹಶೀಲ್ದಾರರಿಂದ ಪಡೆದ ಅಧಿಕೃತ ಆದಾಯ ಪ್ರಮಾಣ ಪತ್ರವನ್ನು ಲಗತ್ತಿಸಬೇಕು.

ಆಯ್ಕೆಯಾದ ಅಭ್ಯರ್ಥಿಗಳಿಗೆ 2 ವರ್ಷಗಳ ತರಬೇತಿ ನೀಡಲಾಗುವುದು. ಹಾಗೂ ಮಾಹೆಯಾನ ರೂ.10000/– ರಂತೆ ಭತ್ಯೆ ನೀಡಲಾಗುವುದು, ತರಬೇತಿಯನ್ನು ಮದ್ಯದಲ್ಲಿ ಬಿಟ್ಟು ಹೋಗಬಾರದು. ಕೇಂದ್ರ ಹಾಗೂ ರಾಜ್ಯ ಸರ್ಕಾರದಲ್ಲಿ ಉದ್ಯೋಗ ದೊರೆತಲ್ಲಿ ಈ ನಿಬಂಧನೆ ಅನ್ವಯವಾಗುವದಿಲ್ಲ, ಅಪೂರ್ಣ ಹಾಗೂ ಅವಧಿ ಮುಗಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು, ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್ ಸರ್ಕಾರಿ ವಕೀಲರು ಅಥವಾ 20 ವರ್ಷಗಳಿಗಿಂತ ಕಡಿಮೆ ಇಲ್ಲದ ವಕೀಲ ವೃತ್ತಿಯಲ್ಲಿ ಅನುಭವವಿರುವ ಖಾಸಗಿ ಹಿರಿಯ ವಕೀಲರಲ್ಲಿ ತರಬೇತಿ ಪಡೆಯಲು ನಿಯೋಜಿಸಲಾಗುವುದು,

ಆಯ್ಕೆಯಾದ ಅಭ್ಯರ್ಥಿಯು ಸರ್ಕಾರದ ಎಲ್ಲ ನಿಂಬಂಧನೆಗೆ ಬದ್ದನಾಗಿರುತ್ತೇನೆ ಎಂದು ರೂ.20/– ಗಳ ಛಾಪಾ ಕಾಗದದ ಮೇಲೆ ಮುಚ್ಚಳಿಕೆಯನ್ನು ಬರೆದುಕೊಡತಕ್ಕದ್ದು, ಆಯ್ಕೆಯಾದ ಅಭ್ಯರ್ಥಿಯು ಸುಳ್ಳು ಮಾಹಿತಿ ಹಾಗೂ ಪ್ರಮಾಣ ಪತ್ರಗಳನ್ನು ಒದಗಿಸಿದಲ್ಲಿ ಶಿಕ್ಷೆಗೊಳಪಡುವದಲ್ಲದೆ ಅವನು ಪಡೆದುಕೊಂಡ ತರಬೇತಿ ಭತ್ಯೆ ಪೂರ್ಣ ಹಣವನ್ನು ವಾರ್ಷಿಕ ಶೇಕಡಾ 10% ರಂತೆ ಬಡ್ಡಿಯೊಂದಿಗೆ ವಸೂಲಿ ಮಾಡಲಾಗುವುದು.

ಅಭ್ಯರ್ಥಿಗಳು ಜೂ 15 2023 ರಿಂದ ಜು.15 2023 ರ ಒಳಗಾಗಿ ಇಲಾಖೆಯ ವೆಬಸೈಟ್ www.sw.kar.nic.in ONLINE ಮುಖಾಂತರ ಅರ್ಜಿಗಳನ್ನು ಸಲ್ಲಿಸಬಹುದು.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ದಿನಾಂಕವನ್ನು ಮತ್ತು ಸ್ಥಳವನ್ನು ತಿಳಿಸಲಾಗುವುದು, ಅಭ್ಯರ್ಥಿಗಳು ಭರ್ತಿ ಮಾಡಿದ ನಿಗಧಿತ ಅರ್ಜಿಯೊಂದಿಗೆ ಅವಶ್ಯಕ ಮಾಹಿತಿಗಳಾದ ಪದವಿ ಪರೀಕ್ಷೆ ಹಾಗೂ ಕಾನೂನು ಪರೀಕ್ಷೆಗಳ ಎಲ್ಲ ವರ್ಷಗಳ ಸೇಮಿಸ್ಟರಗಳ ದೃಡೀಕೃತ ಅಂಕಪಟ್ಟಿ ಮತ್ತು ತೇರ್ಗಡೆ ಹೊಂದಿದ ಪ್ರಮಾಣ ಪತ್ರ, ಜನ್ಮ ದಿನಾಂಕ ಪ್ರಮಾಣ ಪತ್ರ, ಟಿ.ಸಿ,ಬಾರ್ ಅಸೋಶೀಯೇಸನ್‌ದಲ್ಲಿ ಸದಸ್ಯತ್ವ ಪಡೆದ ಬಗ್ಗೆ ಪ್ರಮಾಣ ಪತ್ರ ಹಾಗೂ ಆಧಾಯ ಪ್ರಮಾಣ ಪತ್ರ ಲಗತ್ತಿಸಬೇಕು, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಎರಡು ವರ್ಷದ ಒಳಗೆ ಪದವಿಯನ್ನು ಪಡೆದಿರಬೇಕು ಎಂದು ಬೆಳಗಾವಿ ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಗಳೂರು: ಮೊದಲ ಮೊಬೈಲ್ ಪೋಸ್ಟ್ ಆಫೀಸ್ ಗೆ ಚಾಲನೆ




ಬೆಂಗಳೂರು: ಮೊದಲ ಮೊಬೈಲ್ ಅಂಚೆ ಕೇರಿಗೆ ಮುಖ್ಯ ಪೋಸ್ಟ್‌ಮಾಸ್ಟರ್ ಜನರಲ್ ರಾಜೇಂದ್ರ ಎಸ್ ಕುಮಾರ್ ಅವರು ಮಂಗಳವಾರ ಚಾಲನೆ ನೀಡಿದ್ದು, ಅಬ್ಬಿಗೆರೆ ಇಂಡಸ್ಟ್ರಿಯಲ್ ಏರಿಯಾದಲ್ಲಿ ಕೈಗಾರಿಕೆಗಳ ಮನೆ ಬಾಗಿಲಿಗೆ ಪಾರ್ಸೆಲ್ ಬುಕ್ಕಿಂಗ್ ನೀಡುವ ಮೂಲಕ 'ಪಾರ್ಸೆಲ್ ಬುಕಿಂಗ್ ಆನ್ ವೀಲ್ಸ್' ಯೋಜನೆ ಆರಂಭವಾಗಿದೆ. ಮೊದಲ ದಿನ ಒಟ್ಟು 24 ಪಾರ್ಸೆಲ್‌ಗಳನ್ನು ಬುಕ್ ಮಾಡಲಾಗಿದೆ.

ಗುಲ್ಬರ್ಗ, ದೆಹಲಿ, ಹೈದರಾಬಾದ್ ಮತ್ತು ರಾಂಚಿ ಸೇರಿದಂತೆ 11 ನಗರಗಳಿಗೆ ಪಾರ್ಸೆಲ್‌ಗಳನ್ನು ಕಾಯ್ದಿರಿಸಿದ ಮೊದಲ ವಾಹನಕ್ಕೆ ರಾಜೇಂದ್ರ ಎಸ್ ಕುಮಾರ್ ಅವರು ಚಾಲನೆ ನೀಡಿದರು.

ನಾವು ಕಾರ್ಯನಿರ್ವಹಿಸುವ ಮಾರ್ಗದಲ್ಲಿ ಪಾರ್ಸೆಲ್‌ಗಳನ್ನು ಉಚಿತವಾಗಿ ತೆಗೆದುಕೊಳ್ಳಲಾಗುವುದು ಮತ್ತು ಅಂಚೆ ಕಚೇರಿಗೆ ಕೊಂಡೊಯ್ಯಲಾಗುವುದು. ಅವುಗಳನ್ನು ನಿಯಮಿತ ರೀತಿಯಲ್ಲಿ ವಿಂಗಡಿಸಿ ಕಳುಹಿಸಲಾಗುವುದು.

ಸ್ಥಳದಲ್ಲೇ ರಸೀದಿಗಳನ್ನು ನೀಡಲಾಗುವುದು ಮತ್ತು ಪಾರ್ಸೆಲ್ ಅನ್ನು ಸಹ ಟ್ರ್ಯಾಕ್ ಮಾಡಬಹುದು ಎಂದು ಕುಮಾರ್ ತಿಳಿಸಿದ್ದಾರೆ.

ಈ ಪ್ರಾಯೋಗಿಕ ಯೋಜನೆಯಲ್ಲಿ ಆರಂಭದಲ್ಲಿ ಅಬ್ಬಿಗೆರೆ ಮತ್ತು ಪೀಣ್ಯ ಕೈಗಾರಿಕಾ ಪ್ರದೇಶಗಳಲ್ಲಿ ಸೇವೆ ನೀಡಲಿದೆ. ಅಂಚೆ ವ್ಯಾನ್ ಪ್ರತಿದಿನ ಬೆಳಗ್ಗೆ 11.30ಕ್ಕೆ ಅಬ್ಬಿಗೆರೆ ಪ್ರದೇಶಕ್ಕೆ ಬರಲಿದ್ದು, ಮಧ್ಯಾಹ್ನ 2.30ರವರೆಗೆ ಲಭ್ಯವಿರುತ್ತದೆ.

ಇದಾದ ನಂತರ, ಬುಕಿಂಗ್ ಸಂಗ್ರಹಿಸಲು ವಾಹನವು ಮಧ್ಯಾಹ್ನ 3 ಗಂಟೆಗೆ ಪೀಣ್ಯ ಕೈಗಾರಿಕಾ ಪ್ರದೇಶಕ್ಕೆ ತೆರಳುತ್ತದೆ ಎಂದರು.

ಈ ಮಾರ್ಗದಲ್ಲಿ ಸೇವೆ ಪಡೆಯಲು, 9480884078 ಗೆ ಕರೆ ಮಾಡಬಹುದು.

ಸಾರ್ವಜನಿಕರು ತಮ್ಮ ಪ್ರದೇಶಗಳಲ್ಲಿ ಇದೇ ರೀತಿಯ ಸೇವೆ ಬಯಸುವವರು bd.karbg@indiapost.gov.in ಗೆ ಮೇಲ್ ಮಾಡಿ ತಿಳಿಸಿದರೆ, ಅದರ ಕಾರ್ಯಸಾಧ್ಯತೆಯನ್ನು ಪರಿಶೀಲಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ತಡಮಾಡಿದ ಚಾಲಕ: ಬೇಸತ್ತು ಸ್ವತಃ ಬಸ್ ಚಲಾಯಿಸಿದ ಪ್ರಯಾಣಿಕ; ಡಿವೈಡರ್‌ಗೆ ಡಿಕ್ಕಿ



ಬೀದರ್: ಚಾಲಕ ತಡ ಮಾಡಿದ್ದಕ್ಕೆ ಬೇಸತ್ತ ಪ್ರಯಾಣಿಕನೊಬ್ಬ ಸ್ವತಃ ಬಸ್ ಚಲಾಯಿಸಿಕೊಂಡು ಹೋಗಿ ಡಿವೈಡರ್‌ಗೆ ಡಿಕ್ಕಿ ಹೊಡೆದ ಘಟನೆಯೊಂದು ಔರಾದ್ ಬಸ್ ನಿಲ್ದಾಣದಲ್ಲಿ ಸೋಮವಾರ ಈ ಘಟನೆ ನಡೆದಿದೆ.

ಕರಂಜಿ ಗ್ರಾಮದ ಯಶಪ್ಪ ಸೂರ್ಯವಂಶಿ ಬಸ್ ಚಲಾಯಿಸಿದ ವ್ಯಕ್ತಿಯಾಗಿದ್ದಾನೆ. ವಾರದ ಸಂತೆಗೆ ಬಂದಿದ್ದ ಈತ ಎಲ್ಲವನ್ನೂ ಮರೆತು ಕಂಠಪೂರ್ತಿ ಮದ್ಯ ಸೇವನೆ ಮಾಡಿದ್ದ. ಬಳಿಕ ಊರು ನೆನಪಾಗಿ ವಾಪಸಾಗಲು ಔರಾದ್ ಬಸ್ ನಿಲ್ದಾಣಕ್ಕೆ ಬಂದಿದ್ದಾನೆ.

ಬೀದರ್ ಕಡೆ ಹೊರಡಲು ಅಣಿಯಾಗಿದ್ದ ಬಸ್ ಹತ್ತಿ ಕುಳಿತಿದ್ದಾನೆ. ಎಷ್ಟು ಹೊತ್ತಾದರೂ ಬಸ್ ಹೊರಟಿಲ್ಲ. ಇದರಿಂದ ತಾಳ್ಮೆ ಕಳೆದುಕೊಂಡ ಯಶಪ್ಪ, ಸಿಬ್ಬಂದಿಯನ್ನು ನಿಂದಿಸಿ, ಬಸ್ ಸ್ಟಾರ್ಟ್ ಮಾಡಿದ್ದಾನೆ. ಈ ವೇಳೆ ಗಾಬರಿಯಾದ ಬಸ್‌ನಲ್ಲಿದ್ದ ಜನರು ಕೂಗಾಡಿದ್ದಾರೆ. ಬಸ್ ಸ್ವಲ್ಪ ಮುಂದೆ ಸಾಗುತ್ತಿದ್ದಂತೆಯೇ ಕ್ರೂಸರ್ ವೊಂದಕ್ಕೆ ಬಸ್ ಡಿಕ್ಕಿ ಹೊಡೆದಿದೆ. ಇದರಿಂದ ಆತಂಕಗೊಂಡ ಯಶಪ್ಪ, ಸ್ಟೀರಿಂಗ್ ಬದಿಗೆ ಎಳೆದಿದ್ದಾನೆ. ಈ ವೇಳೆ ಬಸ್ ಡಿವೈಡರ್‌ಗೆ ಡಿಕ್ಕಿ ಹೊಡೆದಿದೆ. ಕೂಡಲೇ ಯಶಪ್ಪನನ್ನು ಬದೆ ಎಳೆದ ಜನರು, ಪೊಲೀಸರ ವಶಕ್ಕೆ ನೀಡಿದ್ದಾರೆ.

ಅದೃಷ್ಟವಶಾತ್ ಈ ಘಟನೆಯಲ್ಲಿಯಾ-ರಿಗೂ ಗಾಯಗಳಾಗಿಲ್ಲ. ಕ್ರೂಸರ್ ಸ್ವಲ್ಪಮಟ್ಟಿಗೆ ಜಖಂಗೊಂಡಿದೆ ಎಂದು ತಿಳಿದುಬಂದಿದೆ.

ಘಟನೆ ಸಂಬಂಧ ಬಸ್ ಚಾಲಕ ರಾಜು ಶಬ್ಬೀರ್ ಪಠಾಣ್ ಔರಾದ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ರವಾನೆ ಅನುಮತಿ ಪಡೆಯಲು ಕಂಟ್ರೋಲ್ ರೂಮ್‌ಗೆ ತೆರಳಿದ್ದೆ. ಈ ಸಂದರ್ಭದಲ್ಲಿ ಬಸ್ ಚಾಲನೆ ಮಾಡಲಾಗಿದೆ. ಬಸ್ ಆನ್ ಆಗುತ್ತಿದ್ದಂತೆಯೇ ಹಿಂದೆ ಓಡಿದೆ. ಆದರೆ, ಆ ವೇಳೆಗೆ ಆರೋಪಿ ವೇಗವಾಗಿ ಬಸ್ ಚಲಾಯಿಸಿ ಜೀಪ್ ಹಾಗೂ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದಿದ್ದಾನೆಂದು ಚಾಲಕ ಶಬ್ಬೀರ್ ಅವರು ಹೇಳಿದ್ದಾರೆ.

# ನೀರು ಸರಬರಾಜು ಸ್ಥಿತಿಗತಿ ಮೌಲ್ಯಮಾಪನ ಸಮೀಕ್ಷೆ ಕಾರ್ಯಗಾರದ

ಬೆಳಗಾವಿ: ಮಹಾನಗರ ಪಾಲಿಕೆ ಮತ್ತು ಕರ್ನಾಟಕ ನಗರ ಮೂಲಸೌಕರ್ಯ ಮತ್ತು ಹಣಕಾಸು ನಿಗಮ ಇವರ ಸಹಯೋಹದೊಂದಿಗೆ ಪಾಲಿಕೆಯ ಸದಸ್ಯರಿಗೆ ನೀರು ಸರಬರಾಜು ಸ್ಥಿತಿಗತಿ ಮೌಲ್ಯಮಾಪನ ಸಮೀಕ್ಷೆ ಕಾರ್ಯಾಗಾರವನ್ನು ದಿನಾಂಕ 07.06.2023 ರಂದು ಪೂಜ್ಯ ಮಹಾಪೌರರ ಅಧ್ಯಕ್ಷತೆಯಲ್ಲಿ ಪಾಲಿಕೆ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಈ ಕಾರ್ಯಾಗಾರದಲ್ಲಿ ವಿಶ್ವಸಂಸ್ಥೆಯ ಯೋಜನಾ ಪರಿಣಾಮ ಮೌಲ್ಯಮಾಪನದ ಸಲಹೆಗಾರರಾದ ಶ್ರೀ ಶೋಬಿಕ್ ದೇವ್, ಕೆಯುಐಡಿಎಫ್‌ಸಿ ಮತ್ತು ಎಲ್&ಟಿ ಅಧಿಕಾರಿಗಳು ಉಪಸ್ಥಿತರಿದ್ದು ಪ್ರಸ್ತುತ ನೀರು ಸರಬರಾಜಿನ ಸ್ಥಿತಿಗತಿ ಮೌಲ್ಯಮಾಪನ ಸಮೀಕ್ಷೆ ಕೈಗೊಳ್ಳುತ್ತಿರುವುದರ ಉದ್ದೇಶ, ಪ್ರಕ್ರಿಯೆ ಇತ್ಯಾದಿಗಳ ಕುರಿತು ಮಾಹಿತಿ ನೀಡಿ ಎಲ್ಲಾ ಪಾಲಿಕೆ ಸದಸ್ಯರು ಈ ಸಮೀಕ್ಷಾ ಕಾರ್ಯಕ್ಕೆ ತಮ್ಮ ಸಹಕಾರವನ್ನು ನೀಡಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಅಥೆನಾ ಇನ್ಫೋನಾಮಿಕ್ಸ್ ಇಂಡಿಯಾ ಪ್ರೈ.ಲಿ ರವರು ಸಮೀಕ್ಷಾ ಪ್ರಕ್ರಿಯೆಯ ಕುರಿತು ವಿವರವಾಗಿ ಮಾಹಿತಿ ನೀಡಿದರು ನಂತರದಲ್ಲಿ ಎಲ್&ಟಿ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕರಾದ ಶ್ರೀ. ಹಾರ್ಧಿಕ್ ದೇಸಾಯಿ ರವರು ಪ್ರಸ್ತುತ ನೀರು ಸರಬರಾಜು ವ್ಯವಸ್ಥೆ, ಇದರಲ್ಲಿ ಕೈಗೊಂಡ ಸುಧಾರಣೆಗಳು ಹಾಗೂ 24/7 ನಿರಂತರ ನೀರು ಸರಬರಾಜು ಯೋಜನೆಯ ಅನುಷ್ಠಾನ ಮತ್ತು ಕಾಮಗಾರಿಗಳ ಪ್ರಗತಿಯ ಕುರಿತು ವಿಸ್ತೃತವಾಗಿ ವಿವರಿಸಿದರು. ಪಾಲಿಕೆ ಸದಸ್ಯರು ಯೋಜನೆಯ ಕುರಿತಾದ ತಮ್ಮ ಪ್ರಶ್ನೆಗಳನ್ನು ಕೇಳಿ ಉತ್ತರ ಪಡೆದು ತಮ್ಮ ಸಲಹೆಗಳನ್ನು ಹಾಗೂ ಮಾರ್ಗದರ್ಶನಗಳನ್ನು ಹಂಚಿಕೊಳ್ಳುವ ಮೂಲಕ ಆದಷ್ಟು ತ್ವರಿತವಾಗಿ ಯೋಜನೆಯನ್ನು ಪೂರ್ಣಗೊಳಿಸಿ ಸದ್ಯದ ನೀರಿನ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ನೀಡುವಂತೆ ಸೂಚಿಸಿದರು.

# ಗ್ರಾಮ ಸಭೆ ನಡೆಸುವಂತೆ ಆಗ್ರಹಿಸಿ ಪ್ರಾಂತ ಕೃಷಿ ಕೂಲಿಕಾರರ ಸಂಘಟನೆ ಒತ್ತಾಯ



ದೇವದುರ್ಗ: ತಾಲ್ಲೂಕಿನ ಜಾಲಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಪಂಚಾಯತ ರಾಜ್ಯ ಕಾಯ್ದೆ ಅಧಿನಿಯಮ ವಿರುದ್ದವಾಗಿ ಯಾವುದೇ ಗ್ರಾಮ ಸಭೆ,ವಾರ್ಡ್ ಸಭೆ ಇಲ್ಲದೆ ಕ್ರೀಯಾಯೋಜನೆಗೆ ಮುಂದಾಗಿದ್ದು, ಯಾವುದೇ ಕಾರಣಕ್ಕೂ ಅನುಮೋದನೆ ಕಳುಹಿಸಬಾರದು ಎಂದು ಆಗ್ರಹಿಸಿ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘಟನೆ ಬುಧವಾರ ಪಂಚಾಯತಿ ಅಧಿಕಾರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಗ್ರಾಮದ ರೈತರು,ಕೂಲಿಕಾರ್ಮಿಕರು ಸೇರಿದೆ ಸಾಮಾನ್ಯ ಜನಗಳಿಗೆ ಅನ್ಯಾಯ ಮಾಡಿ ನಿಯಮ ಬಾಹಿರವಾಗಿ ಕ್ರೀಯಾಯೋಜನೆಗೆ ಮುಂದಾಗಿರುವ ಪಂಚಾಯತಿ ಆಡಳಿತ ಮಂಡಳಿಯೊಂದಿಗೆ ಅಭಿವೃದ್ಧಿ ಅಧಿಕಾರಿಗಳು ಸಾತ್ ನೀಡುತ್ತಿರುವುದು ಅಕ್ಷ್ಯಮ್ಯ ತಪ್ಪು ಮಾಡುತ್ತಿದ್ದು,ನೇರವಾಗಿ ತಪ್ಪಿತಸ್ಥರನ್ನಾಗಿ ಮಾಡಿ ಸೂಕ್ತ ಕ್ರಮ ಜರುಗಿಸುವಂತೆ ಮಾನ್ಯ ಜಿಲ್ಲಾಧಿಕಾರಿಯವರ ಗಮನಕ್ಕೆ ತರಬಯಸುತ್ತೇವೆ.

ಅಲ್ಲದೇ ಕೊಟ್ಟಿ ಕ್ರೀಯಾಯೋಜನೆಗೆ ಯಾವುದೇ ಅನುಮತಿ ನೀಡಬಾರದೆಂದು ಜಿಲ್ಲಾ ಪಂಚಾಯತಿಗೆ ಪ್ರತಿ ಕಳುಹಿಸಲಾಗುತ್ತದೆ.

ಗ್ರಾಮ/ವಾರ್ಡ್ ಸಭೆಯನ್ನು ವ್ಯಾಪಕ ಪ್ರಚಾರ ಮಾಡಿ ನೋಟಿಸ್ ಹಂಚಿ,ಗ್ರಾಮದ ಜನರ ಬೇಡಿಕೆಗಳನ್ನು ಆಧರಿಸಿ ಗ್ರಾಮದ ಅಭಿವೃದ್ಧಿಗೆ ಪೂರಕವಾದ ಕ್ರೀಯಾಯೋಜನೆ ಮಾಡಬೇಕಾಗಿದ್ದ ಗ್ರಾಮ ಪಂಚಾಯತಿ ಆಡಳಿತ ಮಂಡಳಿ ಸಂಪೂರ್ಣವಾಗಿ ಕಾಯ್ದೆ ಮತ್ತು ಕಾನೂನನ್ನು ಉಲ್ಲಂಘಿಸಿ ಮನಬಂದಂತೆ ಕೆಲಸಗಳನ್ನು ಹಂಚಿಕೊಂಡು ಕೊಟ್ಟಿ ಕ್ರೀಯಾಯೋಜನೆಯನ್ನು ಸಿದ್ದಪಡಿಸಿದ್ದಾರೆ.

ಮಾನ್ಯರು ಇದನ್ನು ತಿರಸ್ಕರಿಸಿ ಗ್ರಾಮ ಸಭೆ ಮುಖಾಂತರ ಕ್ರೀಯಾಯೋಜನೆಗೆ ನಿರ್ದೇಶನ ನೀಡಬೇಕು ಮತ್ತು ಕೊಟ್ಟಿ ಕ್ರೀಯಾಯೋಜನೆ ಸಿದ್ದಪಡಿಸಿ ಸರ್ಕಾರಕ್ಕೆ ಮತ್ತು ಕಾನೂನಿಗೆ ವಂಚನೆ ಮಾಡಲು ಸಹಕರಿಸಿದ ಅಧಿಕಾರಿಯ ಮೇಲೆ ಸೂಕ್ತ ಕ್ರಮ ಜರುಗಿಸಬೇಕೆಂದು ಕೇಳಿಕೊಳ್ಳುತ್ತೇವೆ. ಒಂದು ವೇಳೆ ನಿರ್ಲಕ್ಷ್ಯ ವಹಿಸಿ ಅನುಮೋದನೆ ನೀಡದ್ದಲ್ಲಿ ನಿಮ್ಮ ಕಛೇರಿ ಮುಂದೆ ಪ್ರತಿಭಟನೆ ಮಾಡಲಾಗುವುದು ಎಂದು ಮನವಿಯಲ್ಲಿ ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮ ಘಟಕದ ಅಧ್ಯಕ್ಷ ಯಲ್ಲಪ್ಪ ಗಚ್ಚಿನಮನಿ, ಸುರೇಶ್ ಗೌಡ, ತಮ್ಮಣ್ಣ,ಶರಣಪ್ಪ,ಅಯ್ಯಪ್ಪ ಮಡಿವಾಳ, ಶಿವರಾಜ್, ಶಾಂತಕುಮಾರ್ ಮಕಾಶಿ, ನರೇಶ್ ಕುರುಕುಂದಿ,ಬಸ್ಸಪ್ಪ ತವಗ ಇದ್ದರು.

# ಜೂನ್12ಕ್ಕೆ ವೀರಶೈವ ಲಿಂಗಾಯತ ಸಮಾಜದ ಸಭೆ




ಮಾನವಿ: ಪಟ್ಟಣದ ವಳಬಳ್ಳಾರಿ ಚನ್ನಬಸವೇಶ್ವರ ವಿದ್ಯಾರ್ಥಿ ವಸತಿ ನಿಲಯದಲ್ಲಿ ಜೂನ್ 12ರಂದು ಬೆಳಿಗ್ಗೆ 10ಗಂಟೆಗೆ ವೀರಶೈವ ಲಿಂಗಾಯತ ಸಮಾಜದ ಸಭೆ ಎಕರೆಯಲಾಗಿದೆ ಎಂದು ತಾಲ್ಲೂಕು ವೀರಶೈವ ಸಮಾಜದ ಅಧ್ಯಕ್ಷ ಎಸ್.ಈರಪ್ಪಗೌಡ ಚೀಕಲಪರ್ವಿ ಹೇಳಿದರು.

ಬುಧವಾರ ಮಾನ್ವಿ ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಜೂನ್ 12ರಂದು ನಡೆಯುವ ಸಭೆಯಲ್ಲಿ ವಳಬಳ್ಳಾರಿಯ ಸುವರ್ಣಗಿರಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ, ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಭಾಗವಹಿಸುವರು. ಸಭೆಯಲ್ಲಿ ಮಾನ್ವಿ ಪಟ್ಟಣದಲ್ಲಿ ನೂತನ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ, ವಿದ್ಯಾರ್ಥಿ ವಸತಿ ನಿಲಯದ ನಿರ್ವಹಣೆ ಮತ್ತಿತರ ವಿಷಯಗಳ ಕುರಿತು ಚರ್ಚಿಸುವರು. ಈ ಸಭೆಯಲ್ಲಿ ತಾಲ್ಲೂಕಿನ ವೀರಶೈವ ಲಿಂಗಾಯದ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು' ಎಂದು ಮನವಿ ಮಾಡಿದರು.

ಪಟ್ಟಣದ ವಳಬಳ್ಳಾರಿ ಚನ್ನಬಸವೇಶ್ವರ ವಸತಿ ನಿಲಯದಲ್ಲಿ 8ನೇ ತರಗಗತಿಯಿಂದ ಪದವಿ ಹಂತದವರೆಗೆ ವ್ಯಾಸಂಗ ಮಾಡುತ್ತಿರುವ ವೀರಶೈವ ಲಿಂಗಾಯತ ಸಮಾಜದ ವಿದ್ಯಾರ್ಥಿಗಳಿಗೆ ಉಚಿತ ಊಟ ಹಾಗೂ ವಸತಿ ವ್ಯವಸ್ಥೆ ಕಲ್ಪಿಸಲಾಗಿದೆ. ಈ ಕುರಿತು ಆಸಕ್ತ ವಿದ್ಯಾರ್ಥಿಗಳಿಂದ ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ' ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ವೀರಶೈವ ಸಮಾಜದ ಪ್ರಧಾನ ಕಾರ್ಯದರ್ಶಿ ಹರಿಹರ ಪಾಟೀಲ, ಇತರ ಪದಾಧಿಕಾರಿಗಳಾದ ವಿರೂಪಾಕ್ಷಪ್ಪಗೌಡ ಆಲ್ದಾಳ, ಶ್ರೀಧರ ಸ್ವಾಮಿ, ವೀರೇಶ ಸ್ವಾಮಿ ರೌಡೂರು, ವೀರನಗೌಡ ಸಂಗಾಪೂರ ಉಪಸ್ಥಿತರಿದ್ದರು.

# ವಾಂತಿ ಬೇಧಿ, ಕಾಲರಾ, ಆಮಶಂಕೆ ಹರಡದಂತೆ ಮುಂಜಾಗ್ರತಾ ಕ್ರಮಕ್ಕೆ ಸೂಚನೆ: ರಾಹುಲ್ ಪಾಂಡೆ

ಕೊಪ್ಪಳ : ಕಲುಷಿತ ನೀರಿನ ಸೇವನೆಯಿಂದ ಸಾಂಕ್ರಾಮಿಕ ರೋಗಗಳಾದ ವಾಂತಿ-ಭೇದಿ, ಕಾಲರಾ, ಆಮಶಂಕೆ ಹಾಗೂ ಇತ್ಯಾದಿ ರೋಗಗಳು ಹರಡದಂತೆ ಮುಂಜಾಗೃತ ಕ್ರಮಗಳನ್ನು ವಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಆಡಳಿತ ಭವನದಲ್ಲಿನ ಜಿ.ಎಚ್.ಪಾಟೀಲ ಸಭಾಂಗಣದಲ್ಲಿ ಜೂನ್ 7ರಂದು ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯ ಕೆಲವು ಕಡೆಗಳಲ್ಲಿ ವಾಂತಿ ಬೇಧಿ ಪ್ರಕರಣಗಳು ಕಂಡು ಬಂದಿರುವುದರಿಂದ ಮುಂಜಾಗ್ರತೆ ವಹಿಸಬೇಕು. ಜಿಲ್ಲೆಯ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಟ್ಯಾಂಕ್, ಸಂಪು ಮತ್ತು ಇತರೆ ಕುಡಿಯುವ ನೀರನ್ನು ಸರಬರಾಜು ಮಾಡುವ ಎಲ್ಲಾ ಕುಡಿಯುವ ನೀರಿನ ಮೂಲಗಳ ನೈರ್ಮಲ್ಯ ಮತ್ತು ಸುರಕ್ಷತೆಯ ಬಗ್ಗೆ ಖಾತರಿಪಡಿಸಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು, ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾ-ರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಮುಂಜಾಗ್ರತಾ ವಹಿಸಲು ತಿಳಿಸಲಾಗಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಮಕ್ಕಳಿಗೆ ಹಾಗು ವೃದ್ದರಿಗೆ ಸಾಂಕ್ರಾಮಿಕ ರೋಗಗಳು ಹರಡಿರುವುದು ಕಂಡುಬಂದಲ್ಲಿ ಅಂತಹ ರೋಗಿಗಳನ್ನು ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ತುರ್ತು ಚಿಕಿತ್ಸೆಗಾಗಿ ದಾಖಲಿಸಲು ಸೂಚಿಸಲಾಗಿದೆ. ಒಂದು ವೇಳೆ ರೋಗಿಯು ಚಿಕಿತ್ಸೆಗೆ ಸ್ಪಂದಿಸದೇ ಇದ್ದಲ್ಲಿ ತಕ್ಷಣವೇ ಅಂಬ್ಯುಲೆನ್ಸ್ ಮೂಲಕ ಜಿಲ್ಲಾ ಆಸ್ಪತ್ರೆಗೆ ರವಾನಿಸಲು ಅಗತ್ಯ ಕ್ರಮವಹಿಸಲು ತಿಳಿಸಲಾಗಿದೆ.

ಸಾರ್ವಜನಿಕರಿಗೆ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಚ ಮತ್ತು ಶುದ್ದ ಕುಡಿಯುವ ನೀರನ್ನು ಪೂರೈಸುವಲ್ಲಿ ಕಾರ್ಯಪ್ರವೃತ್ತರಾಗಲು ಹಾಗೂ ಯಾವುದೇ ರೀತಿಯ ಅವಘಡಗಳು ಸಂಭವಿಸದಂತೆ ತಕ್ಷಣವೇ ಮುಂಜಾಗೃತ ಕ್ರಮವಹಿಸಲು ಮತ್ತು ಒಂದು ವೇಳೆ ಸಾಂಕ್ರಾಮಿಕ ರೋಗಗಳ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣವೇ



ಸದರಿ ಸ್ಥಳಗಳಿಗೆ ಸ್ಥಾನಿಕವಾಗಿ ಭೇಟಿ ನೀಡಿ ಸಮಸ್ಯೆಗಳನ್ನು ಪರಿಹ-ರಿಸಲು ನಿಯಮಾನುಸಾರ ಅಗತ್ಯ ಕ್ರಮತೆಗೆದುಕೊಳ್ಳಲು ತಿಳಿಸಲಾಗಿದೆ.

ಜಿಲ್ಲೆಯ ಗ್ರಾಮೀಣ ಜನವಸತಿ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರಿನ ಸಂಬಂಧಿಸಿದ ತಾಲೂಕುಗಳ ತಹಸೀಲ್ದಾರರು, ತಾಲೂಕು ಆರೋಗ್ಯಾಧಿಕಾರಿಗಳು ಹಾಗೂ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲೂಕು ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಈ ಕೂಡಲೇ ಸಭೆ ನಡೆಸಿ ಕಟ್ಟುನಿಟ್ಟಿನ ಕ್ರಮತೆಗೆದುಕೊಳ್ಳಬೇಕು ಎಂದು ಸೂಚನೆ ನೀಡಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕುಡಿಯುವ ನೀರನ್ನು ಸರಬರಾಜು ಮಾಡುವ ಮೂಲಗಳಾದ ಓಎಚ್‌ಟಿ, ಎಂವಿಎಸ್ ಮತ್ತು ಸಂಪು ಇತ್ಯಾದಿಗಳ ನೀರಿನ ಪರೀಕ್ಷೆ ಕೈಗೊಂಡು, ಒಂದು ವೇಳೆ ಸದರಿ ನೀರು ಕುಡಿಯಲು ಅಸುರಕ್ಷಿತ ಎಂದು ಕಂಡುಬಂದಲ್ಲಿ ಆ ನೀರನ್ನು ಕುಡಿಯಲು ಉಪಯೋಗಿಸದಂತೆ ನಿರ್ಭಂದಿಸಿ ಅಂತಹ ಜನವಸತಿ ಪ್ರದೇಶಗಳಿಗೆ ಟ್ಯಾಂಕರ್, ಶುದ್ದ ಕುಡಿಯುವ ನೀರಿನ ಘಟಕಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ಅಗತ್ಯ ಕ್ರಮವಹಿಸಲು ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚಿಸಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕುಡಿಯುವ ನೀರನ್ನು ಸರಬರಾಜು ಮಾಡುವ ಮೂಲಗಳಾದ ಓಎಚ್‌ಟಿ, ಎಂವಿಎಸ್, ಸಂಪು ಇತ್ಯಾದಿಗಳನ್ನು ಕಾಲಕಾಲಕ್ಕೆ ಸ್ವಚ್ಛಗೊಳಿಸಿ ಕ್ಲೋ-ರಿನೇಷನ್ ಮಾಡಿಸಲು ಮತ್ತು ಕಲುಷಿತ ನೀರಿನ ಸೇವನೆಯಿಂದ ಸಾಂಕ್ರಾಮಿಕ ರೋಗಗಳಾದ ವಾಂತಿ-ಭೇದಿ, ಕಾಲರಾ, ಆಮಶಂಕೆ ಹಾಗೂ ಇತ್ಯಾದಿ ರೋಗಗಳು ಹರಡದಂತೆ ಮುಂಜಾಗೃತ ಕ್ರಮವಾಗಿ ಡಂಗೂರು ಹಾಕಿಸುವುದರ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲು ತಿಳಿಸಲಾಗಿದೆ.

ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಸಮಾರು 50 ಕೆಜಿ ಪ್ರಮಾಣದ ಬ್ಲೀಚಿಂಗ್ ಪೌಡರ್ ಕಾಯ್ದಿ-ರಿಸಿಟ್ಟುಕೊಳ್ಳಲು ಸೂಚಿಸಲಾಗಿದೆ. ತಗ್ಗು ಪ್ರದೇಶದಲ್ಲಿ ಹಾಕಲಾಗಿರುವ ಕುಡಿಯುವ ನೀರಿನ ನಲ್ಲಿಗಳನ್ನು ಎತ್ತರ ಮಟ್ಟದಲ್ಲಿ ಹಾಕಲು ಹಾಗೂ ನಲ್ಲಿಯ ಅಕ್ಕ ಪಕ್ಕದಲ್ಲಿ ಸ್ವಚ್ಚತೆ ಮತ್ತು ನೈರ್ಮಲ್ಯ ಕಾಪಾಡಿಕೊಳ್ಳಲು ಜನರಿಗೆ ತಿಳಿಸಲು ಹೇಳಲಾಗಿದೆ.

ತುರ್ತು ಸಂದರ್ಭಗಳಲ್ಲಿ ಅಂಬ್ಯುಲೆನ್ಸ್ ಸೇವೆಗಳನ್ನು ಒದಗಿಸುವ ಕು-ರಿತು ವಾಹನಗಳನ್ನು ಸುರಕ್ಷತೆಯಿಂದ ಇಟ್ಟುಕೊಳ್ಳಲು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಲಕನಂದಾ ಕೆ. ಮಳಗಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ ಇದ್ದರು.

# ಸರ್ಕಾರಿ ಶಾಲೆಗೆ ಅಸ್ಪೃಶ್ಯತೆ ಪಟ್ಟ ಕಟ್ಟುವ ಸವರ್ಣೀಯರ ವಿರುದ್ಧ ಕ್ರಮಕ್ಕೆ ಡಿಎಸ್‌ಎಸ್ ಒತ್ತಾಯ



ಶಿಡ್ಲಘಟ್ಟ: ಸಾದಲಿ ಹೋಬಳಿ ಎಸ್ ದೇವಗಾನಹಳ್ಳಿ ಗ್ರಾಮದ ಸರ್ಕಾರಿ ಶಾಲೆಗೆ ಸವರ್ಣಿಯರು ತಮ್ಮ ಮಕ್ಕಳನ್ನು ದಾಖಲು ಮಾಡದೆ ಅಸ್ಪೃಶ್ಯತೆ ಆಚರಣೆ ಮಾಡುತ್ತಿರುವ ಬಗ್ಗೆ ಸೂಕ್ತ ಕ್ರಮ ಜರುಗಿಸಲು ದಲಿತ ಸಂಘರ್ಷ ಸಮಿತಿ ವತಿಯಿಂದ ಆರ್ ಆರ್ ಟಿ ಶಿರಸ್ತೇದಾರ್ ಅಸಿಯಾಬೀ ರವರ ಮುಖಾಂತರ ತಹಶೀಲ್ದಾರ್ ರವರಿಗೆ ಮನವಿ ನೀಡಿದರು.

ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಘಟನಾ ಸಂಚಾಲಕರಾದ ಎನ್ ಎ ವೆಂಕಟೇಶ್ ಮಾತನಾಡಿ, ಎಸ್ ದೇವಗಾನಹಳ್ಳಿ ಸರ್ಕಾರಿ ಶಾಲೆಯಲ್ಲಿ ಪ್ರಸ್ತುತ 53 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಈ ಪೈಕಿ 52 ವಿದ್ಯಾರ್ಥಿಗಳು ಪರಿಶಿಷ್ಟ ಜಾತಿಗೆ ಸೇರಿದವರು, ಕೇವಲ ಒಬ್ಬ ವಿದ್ಯಾರ್ಥಿ ಮಾತ್ರ ಇತರೆ ಜಾತಿಯ ವಿದ್ಯಾರ್ಥಿ ಕಳೆದ ಹತ್ತು ವರ್ಷಗಳಿಂದಲೂ ಆ ಗ್ರಾಮದಲ್ಲಿ ಇತರೆ ಜನಾಂಗದವರು ಈ ಶಾಲೆಯನ್ನು ಪರಿಗಣಿಸಿ ತಮ್ಮ ಮಕ್ಕಳನ್ನು ಪಕ್ಕದ ಗ್ರಾಮದ ಎಸ್ ಗುಂಡ್ಲಹಳ್ಳಿ ಶಾಲೆಗೆ ದಾಖಲು ಮಾಡುತ್ತಿದ್ದಾರೆ.

ಆ ಶಾಲೆಯ ಶಿಕ್ಷಕರು ಅನೇಕ ರೀತಿಯ ಪ್ರಯತ್ನಗಳನ್ನು ಮಾಡುತ್ತಿದ್ದರು ಯಾವುದೇ ಬದಲಾವಣೆ ಆಗಿರುವುದಿಲ್ಲ, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕಾಗಿದ್ದ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸಹ ಕಣ್ಣು ಮುಚ್ಚಿ ಕುಳಿತಿ-ರುವುದು ಏಕೆ ? ಎಂಬ ಪ್ರಶ್ನೆ ಮೂಡುತ್ತಿದೆ, ಇಲ್ಲಿ ನಮಗೆ ಸ್ಪಷ್ಟವಾಗಿ ತಿಳಿಯುವುದೇನೆಂದರೆ ಎಸ್ ದೇವಗಾನಹಳ್ಳಿ ಗ್ರಾಮದಲ್ಲಿ ಇಂದಿಗೂ ಅಸ್ಪೃಶ್ಯತೆ ಆಚರಣೆ ಜೀವಂತವಾಗಿದೆ. ಎಂದು ತಿಳಿದು ಬರುತ್ತಿದೆ,

ಮನವಿಯನ್ನು ಜಿಲ್ಲಾಧಿಕಾ-ರಿಗಳು, ಪ್ರಾರ್ಥಮಿಕ ಶಿಕ್ಷಣ ಸಚಿವರು, ಹಾಗೂ ಕ್ಷೇತ್ರದ ಶಾಸಕರಿಗೆ ಕೊಡುತ್ತಿದ್ದೇವೆ, ಆದ್ದರಿಂದ ಸಂಬಂಧಪಟ್ಟ ಇಲಾಖೆಯವರು ಈ ಕೂಡಲೇ ಇದರ ಬಗ್ಗೆ ಹೆಚ್ಚಿತ್ತು ಕೊಂಡು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಇದರ ಬಗ್ಗೆ ನಿರ್ಲಕ್ಷ್ಯ ತೋ-ರಿದ್ದಲ್ಲಿ ಉಗ್ರವಾದ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಆಗ್ರಹಿಸಿದರು.

ಮನವಿಯನ್ನು ಸ್ವೀಕರಿಸಿದ ಆರ್ ಆರ್ ಟಿ ಶಿರಸ್ತೇದಾರ್ ಅಸಿಯಾಬೀ ರವರು ಮಾತನಾಡಿ, ತಾವು ನೀಡಿರುವ ಮನವಿಯನ್ನು ತಹಶೀಲ್ದಾರ್ ರವರ ಗಮನಕ್ಕೆ ತಂದು ಶೀಘ್ರದಲ್ಲೇ ಈ ಸಮಸ್ಯೆಯನ್ನು ಬಗೆಹರಿಸಲಾಗುವುದು ಎಂದು ಹೇಳಿದರು.

ಈ ಸಮಯದಲ್ಲಿ ದಲಿತ ಮುಖಂಡರಾದ ರಾಜ-ಕುಮಾರ್ ದೊಡ್ಡತಿರುಮಳಯ್ಯ ಮುನಿಕದಿರಪ್ಪ ನರೇಶ್, ಮುನಿಕೃಷ್ಣಪ್ಪ, ರಾಮಚಂದ್ರ, ಮುಜ್ಜಿ, ಮುರಳಿ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು.

# ಇಡಿ ದಾಳಿ: ಬೆಂಗಳೂರು, ದಾವಣೆಗೆರೆಯಲ್ಲಿ 100 ಕೋಟಿ ರೂ. ಗೂ ಹೆಚ್ಚಿನ ಮೌಲ್ಯದ ಆಸ್ತಿ, ನಗದು ಪತ್ತೆ




ಬೆಂಗಳೂರು: ಭಾರತ್ ಇನ್ಫ್ರಾ ಎಕ್ಸ್ಪೋರ್ಟ್ ಆ್ಯಂಡ್ ಇಂಪೋರ್ಟ್ ಲಿಮಿಟೆಡ್ನಿಂದ ವಂಚನೆ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾ-ರಿಗಳು ಇಂದು ಬೆಂಗಳೂರು ಹಾಗೂ ದಾವಣಗೆರೆಯಲ್ಲಿ ದಾಳಿ ನಡೆಸಿದ್ದು, ಕೋಟ್ಯಂತರ ಮೌಲ್ಯದ ಆಸ್ತಿ ಮತ್ತು ಲಕ್ಷಾಂತರ ರೂಪಾಯಿ ನಗದು ಪತ್ತೆಯಾಗಿದೆ.

ಭಾರತ್ ಇನ್ಫ್ರಾ ಎಕ್ಸ್ಪೋರ್ಟ್ ಆ್ಯಂಡ್ ಇಂಪೋರ್ಟ್ ಲಿಮಿಟೆಡ್ ವಿರುದ್ಧ ಬ್ಯಾಂಕ್ಗೆ ವಂಚನೆ ಪ್ರಕರಣ ಸಂಬಂಧ ಎರಡು ಜಿಲ್ಲೆಗಳಲ್ಲಿ ಏಳು ಕಡೆ ಇಡಿ ದಾಳಿ ನಡೆಸಲಾಗಿದೆ. ದಾಳಿ ವೇಳೆ 100 ಕೋಟಿ ರೂಪಾಯಿ ಮೌಲ್ಯದ ಸ್ಥಿರಾಸ್ತಿ, 14 ಲಕ್ಷ ರೂಪಾಯಿ ನಗದು ಪತ್ತೆಯಾಗಿದೆ.

ಈ ವೇಳೆ ಅಧಿಕಾರಿಗಳು ಹಲವು ದಾಖಲೆಗಳು ಹಾಗೂ ಡಿಜಿಟಲ್ ಡಿವೈಸ್ಗಳನ್ನೂ ವಶಪಡಿಸಿಕೊಂಡಿದ್ದಾರೆ. ಜಾರಿ ನಿರ್ದೇಶನಾಲಯದ ಅಧಿಕಾ-ರಿಗಳು ಬ್ಯಾಂಕ್ ಖಾತೆ ಮಾಹಿತಿ ಸಂಗ್ರಹಿಸಿ ಖಾತೆಯನ್ನು ಜಪ್ತಿ ಮಾಡಿದ್ದಾರೆ.


# ರೈತರ ಅಭಿವೃದ್ಧಿಗೆ ಪಣತೊಟ್ಟ ನೂತನ ಶಾಸಕ ಗಾಲಿ ಜನಾರ್ಧನ್ ರೆಡ್ಡಿ



ಗಂಗಾವತಿ: ರೈತರು ದೇಶದ ಬೆನ್ನೆಲಬು, ಅವರ ಬೆನ್ನೆಲಬಾಗಿ ನಾನು ನಿಂತುಕೊಳ್ಳುತ್ತೇನೆ ಎಂದು ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರು ಹೇಳಿದರು. ಗಂಗಾವತಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಿರೇಜಂತಕಲ್ ಗ್ರಾಮದ ಬಳಿಯಲ್ಲಿ ಹೊಲ ಕಾಲುವೆಗಳ ಆಧುನೀಕರಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ನಂತರ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಶಾಸಕ ಗಾಲಿ ಜನಾರ್ದನ ರೆಡ್ಡಿ, ರೈತರ ಜಮೀನುಗಳಿಗೆ ಯಾವುದೇ ರೀತಿಯಲ್ಲಿ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ತಿಳಿಸುತ್ತೇನೆ. ಕೃಷಿಗೆ ಸಂಭವಿಸಿದ ಯಾವುದೇ ವಿಷಯಗಳು ಇದ್ದರೂ ನನ್ನ ಗಮನಕ್ಕೆ ತನ್ನಿ ಅವುಗಳನ್ನು ಪರಿ ಹರಿಸಿ ಕೊಡುತ್ತೇನೆ ಎಂದರು.

ಇದೇ ಸಂದರ್ಭದಲ್ಲಿ ಕೆಲ ರೈತರು, ಕಾಮಗಾ-ರಿಗಳ ಬಗ್ಗೆ ಅಧಿಕಾರಿಗಳು ಯಾವುದೇ ರೀತಿಯ ಮಾಹಿತಿಯನ್ನು ಕೊಡುವುದಿಲ್ಲ ಎಂದು ಶಾಸಕರ ಗಮನಕ್ಕೆ ತಂದರು. ಈ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯರಾದ ಹೆಚ್ ಆರ್ ಶ್ರೀನಾಥ್, ಸಂಗಟಿ ಕರಿಯಣ್ಣ,ಮನೋಹರ ಗೌಡ ಹೇರೂರು, ರಾಘವೇಂದ್ರ ಶೆಟ್ಟಿ, ರಾಜೇಶ್ ಬಿ, ಅಮಾತೆಪ್ಪ, ಸುದರ್ಶನ ವರ್ಮಾ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳು ಸೇರಿದಂತೆ ಇನ್ನಿತರರು ಉಪಸ್ಥಿತ-ರಿದ್ದರು.

# ಸಮಾಜ ಸೇವೆ ವ್ಯಕ್ತಿತ್ವ ವಿಕಾಸನವಾಗಬೇಕಾದರೆ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳ ಜೀವನದಲ್ಲಿ ಅತ್ಯವಶ್ಯಕ



ಹುಮನಾಬಾದ : ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರ 3ನೇ ದಿನದಂದು ರಾಮಚಂದ್ರ ವೀರಪ್ಪ ಮಹಿಳಾ ಕಲಾ, ವಿಜ್ಞಾನ, ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯ ಹುಮ್ನಾಬಾದ್ ನಲ್ಲಿ ವಿಶೇಷವಾದ ಉಪನ್ಯಾಸವನ್ನು ನೀಡಲು ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ರಾಜೇಂದ್ರ ದಾಡ್ಡಗೆ ಸರ್ ಅವರು ಸ್ಕೌಟ್ಸ್ ಮತ್ತು ಗೈಡ್ಸ್ ನ ಮಹತ್ವದ ಬಗ್ಗೆ ಹೇಳುತ್ತಾ ಸಮಾಜ ಸೇವೆಯನು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನವಾಗಬೇಕಾದರೆ ಸ್ಕೌಟ್ಸ್ ಮತ್ತು ಗೈಡ್ಸ್ ಅತ್ಯಂತ ಅವಶ್ಯಕ ನೀವೆಲ್ಲ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಶಿಸ್ತನ್ನು, ಸಮಯ ಪ್ರಜ್ಞೆಯನ್ನು, ಸೇವಾ ಮನೋಭಾವನೆಯನು ನಿಮ್ಮಲ್ಲಿ ಬೆಳೆಸುತ್ತದೆ ಎಂದು ತಿಳಿಸಿದರು.

ಇದೆ ಸಂದರ್ಭದಲ್ಲಿ ರಾಮಚಂದ್ರ ವೀರಪ್ಪ ಮಹಿಳಾ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಗಿರಿರಾಜ್ ಕೆ ಕಟ್ಟೊಳಿ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉಪ ಪ್ರಾಚಾರ್ಯರಾದ ಪ್ರೊ ಮಹದೇವ ರೆಡ್ಡಿ ಬಿ ವಾಡೆ. ಎನ್ ಎಸ್ ಎಸ್ ನ ಕಾರ್ಯಕ್ರಮದ ಅ ಮತ್ತು ಬ ಘಟಕದ ಅಧಿಕಾ-ರಿಗಳಾದ ಪ್ರೊ ಭೀಮರಾವ್ ಜೆ ಕುಲಕರ್ಣಿ. ಮತ್ತು ಪ್ರೊ ಅನಿತಾ ಕೆ ಪಾಟೀಲ್ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ನೇಹಾ ನಿರೂಪಣೆ, ಭಾಗ್ಯಶ್ರೀ ಸ್ವಾಗತ, ನಿಶಾ ವಂದನಾರ್ಪಣೆ ಮಾಡಿದರು.

## ಮಹಾನಗರ ಪಾಲಿಕೆಯಲ್ಲಿ ವಿವಿಧ ಇಲಾಖೆಗಳ ಕಾಮಗಾರಿಗಳ ಪರಿಶೀಲನಾ ಸಭೆ

# ನಾಗರಿಕರ ಸಮಸ್ಯೆ ಪರಿಹಾರಕ್ಕೆ ಮೊದಲ ಆದ್ಯತೆ: ಸಚಿವ ಸತೀಶ್ ಜಾರಕಿಹೊಳಿ




ಬೆಳಗಾವಿ: ಸ್ಮಾರ್ಟ್ ಸಿಟಿ ಯೋಜನೆಯ ಸಮರ್ಪಕ ಅನುಷ್ಠಾನ; ಕುಡಿಯುವ ನೀರು ಸರಬರಾಜು; ಆರೋಗ್ಯ ಸೌಲಭ್ಯ, ಕಸ ವಿಲೇವಾರಿ; ಸ್ಮಶಾನ ಅಭಿವೃದ್ಧಿ, ಮೂಲಸೌಕರ್ಯ ಒದಗಿಸುವುದು ಸೇ–ರಿದಂತೆ ಎಲ್ಲ ಕೆಲಸಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸುವುದು ಎಲ್ಲ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ. ಈ ನಿಟ್ಟಿನಲ್ಲಿ ಎಲ್ಲರೂ ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು ಎಂದು ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಸೂಚನೆ ನೀಡಿದರು.

ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಬುಧವಾರ ನಡೆದ ಸ್ಮಾರ್ಟ್ ಸಿಟಿ, ಕುಡಿಯುವ ನೀರು ಸರಬರಾಜು, ಹೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ಕಾಮಗಾ–ರಿಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜನರ ಸಮಸ್ಯೆಗಳನ್ನು ಅರಿತುಕೊಂಡು ಅವುಗಳನ್ನು ಪರಿಹರಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಸ್ಮಾರ್ಟ್ ಸಿಟಿ, ಹೆಸ್ಕಾಂ ಸೇರಿದಂತೆ ಪ್ರಮುಖ ಇಲಾಖೆಯ ಪ್ರತ್ಯೇಕವಾದ ಸಭೆ ನಡೆಸಲಾಗುವುದು.

ಅಧಿಕಾರಿಗಳಿಗೆ ಸ್ವಲ್ಪಮಟ್ಟಿಗೆ ಸಮಯ ನೀಡಲಾಗುವುದು. ಜನರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಉತ್ತಮ ಕೆಲಸ ಮಾಡಬೇಕು. ಮಹಾನಗರ ಪಾಲಿಕೆಯ ಸದಸ್ಯರು ತಿಳಿಸಿದ ಕೆಲಸಗಳನ್ನು ಆದ್ಯತೆ ಮೇರೆಗೆ ಮಾಡಬೇಕು ಎಂದರು.

ಶಾಹು ಮಹಾರಾಜರ ಪುತ್ಥಳಿ ಸ್ಥಾಪನೆಗೆ ಸೂಚನೆ: ಬೆಳಗಾವಿ ನಗರದಲ್ಲಿ ಶಾಹು ಮಹಾರಾಜರ ಪುತ್ಥಳಿ ನಿರ್ಮಾಣಕ್ಕೆ ಒಂದು ಕೋಟಿ ರೂಪಾಯಿ ನೀಡಲಾಗಿದೆ. ಪುತ್ಥಳಿ ನಿರ್ಮಾಣ ಕೆಲಸ ತಕ್ಷಣವೇ ಆಗಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ಪಾಲಿಕೆ ಆಯುಕ್ತರಿಗೆ ಸೂಚನೆ ನೀಡಿದರು.

ಕ್ರೀಡಾಸಂಕೀರ್ಣ, ಈಜುಕೊಳ ಮತ್ತಿತರ ಕಾಮಗಾರಿಗಳು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಜನರ ಬಳಕೆಗೆ ಮುಕ್ತಗೊಳಿಸಬೇಕು.

ಸಭೆಯಲ್ಲಿ ಜನರು ಸಲ್ಲಿಸಿದ ಅಹವಾಲುಗಳನ್ನು ಗಂಭೀರವಾಗಿ ಪರಿಗಣಿಸಿ ಅವುಗಳನ್ನು ಪರಿಹರಿಸಬೇಕು. ಉತ್ತಮ ಸಲಹೆಗಳನ್ನು ಅನುಷ್ಠಾನಗೊಳಿಸಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಸೂಚನೆ ನೀಡಿದರು.

ಬೆಳಗಾವಿ ನಗರ ಪ್ರವೇಶಿಸುವ ಮಾರ್ಗದಲ್ಲಿ ಕಸದ ರಾಶಿ ಕಂಡುಬರುತ್ತಿದ್ದು, ಇದನ್ನು ನಿಯಮಿತವಾಗಿ ಸ್ವಚ್ಛಗೊಳಿಸಲು ಕ್ರಮ ಕೈಗೊಳ್ಳಬೇಕು.

ವ್ಯಾಪಾರಸ್ಥರು, ಅಂಗಡಿಕಾರರು ರಾತ್ರಿ ವೇಳೆ ನಿಗದಿತ ಸ್ಥಳ ಹೊರತುಪಡಿಸಿ ಇತರೆಡೆ ಕಸ ಎಸೆದರೆ ಅಂತಹವರ ಮೇಲೆ ನಿಗಾವಹಿಸಿ ದಂಡ ವಿಧಿಸಬೇಕು ಎಂದು ಸೂಚನೆ ನೀಡಿದರು.

ಹಿಂದೆ ವಸತಿ ಯೋಜನೆಯಡಿ ಅರ್ಜಿ ಸಲ್ಲಿಸಿ ವಂತಿಕೆಯನ್ನು ತುಂಬಿದ ಫಲಾನುಭವಿಗಳು ಈಗ ಕಾರಣಾಂತರದಿಂದ ವಸತಿ ಸೌಲಭ್ಯ ಬೇಡ ಎಂದು ವಂತಿಕೆ ಹಣ ಹಿಂದಿರುಗಿಸುವಂತೆ ಕೋರಿ ಅರ್ಜಿ ಸಲ್ಲಿಸಿದರೆ ಅಂತವರಿಗೆ ವಂತಿಗೆ ಹಣ ಹಿಂದಿರುಗಿಸಲು ಒಂದು ತಿಂಗಳಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಸಚಿವ ಜಾರಕಿಹೊಳಿ ಹೇಳಿದರು.

ಕಾಕತಿ ಕೆಲವು ಭಾಗವು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಬರುತ್ತಿದ್ದು, ತೆರಿಗೆ ಕಟ್ಟಿದರೂ ಕಟ್ಟಡ ನಿರ್ಮಾಣಕ್ಕೆ ಪರವಾನಿಗೆ ನೀಡದಿರುವ ಬಗ್ಗೆ ಅಧಿಕಾರಿಗಳನ್ನು ಪ್ರಶ್ನಿಸಿದ ಅವರು, ಈ ಸಮಸ್ಯೆ ಪರಿಹಾರ ಕಂಡುಹಿಡಿಯುವಂತೆ ತಿಳಿಸಿದರು.

ಅಕ್ರಮ–ಸಕ್ರಮ ಯೋಜನೆಯಡಿ ಅವಕಾಶಗಳಿದ್ದರೆ ಪರಿಶೀಲಿಸುವಂತೆ ಹೇಳಿದರು.

**ವಾರ್ಡ್ ಸಮಿತಿಗಳನ್ನು ರಚಿಸಲು ಸೂಚನೆ:** ವಾರ್ಡ್ ಸಮಿತಿಗಳು ಇನ್ನೂ ರಚನೆಯಾಗದಿರುವ ಕುರಿತು ಮಾಹಿತಿಯನ್ನು ಪಡೆದುಕೊಂಡ ಅವರು, ಮುಂದಿನ ಒಂದು ತಿಂಗಳಿನಲ್ಲಿ ವಾರ್ಡ್ ಸಮಿತಿ ರಚಿಸುವಂತೆ ತಿಳಿಸಿದರು.

ಬೆಳಗಾವಿ ನಗರದಲ್ಲಿ ನಿರಂತರ ನೀರು(24x7) ಸರಬರಾಜು ಮಾಡುವ ಯೋಜನೆಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಸಭೆ ನಡೆಸಿ ಕಾಮಗಾ–ರಿಗಳನ್ನು ಚುರುಕುಗೊಳಿಸಲು ಹಾಗೂ ಸಮರ್ಪಕವಾಗಿ ನೀರು ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದರು.

ಪೌರಕಾರ್ಮಿಕರ ಆಯ್ಕೆಯ ಪಟ್ಟಿ ಸಿದ್ಧವಾಗಿದ್ದರೆ ಕೂಡಲೇ ನೇಮಕಾತಿ ಆದೇಶ ನೀಡಬೇಕು ಎಂದು ಪಾಲಿಕೆಯ ಆಯುಕ್ತರಿಗೆ ಸೂಚನೆ ನೀಡಿದರು.

155 ಪೌರಕಾರ್ಮಿಕರ ನೇಮಕಾತಿ ಆದೇಶವನ್ನು ಒಂದೇ ಹಂತದಲ್ಲಿ ನೀಡಲಾಗುವುದು ಎಂದು ತಿಳಿಸಿದರು.

ಕೆಲವು ಕಡೆಗಳಲ್ಲಿ ಹೊಸ ಬಡಾವಣೆ ನಿರ್ಮಾಣ ಮಾಡುವಾಗ ಕೇವಲ ಹತ್ತು ಅಡಿ ರಸ್ತೆ ಮಾಡಲಾಗುತ್ತಿದ್ದು, ಇದರಿಂದ ನಿವಾಸಿಗಳಿಗೆ ತೀವ್ರ ತೊಂದರೆಯಾಗುತ್ತಿದೆ. ಜಿಲ್ಲಾಧಿಕಾರಿಗಳು ಈ ಬಗ್ಗೆ ಪರಿಶೀಲಿಸುವಂತೆ ತಿಳಿಸಿದರು.

ಕುಡಿಯುವ ನೀರಿನ ಸಮಸ್ಯೆ ಬಗೆಹ–ರಿಸಲು ಅನುಕೂಲವಾಗುವಂತೆ ನಗರದಲ್ಲಿ ಇರುವ ಎಲ್ಲ ಕೊಳವೆ ಬಾವಿಗಳನ್ನು ಪುನರುಜ್ಜೀವನಗೊಳಿಸಬೇಕು; ಅಗತ್ಯವಿದ್ದರೆ ದುರಸ್ತಿಗೊಳಿಸಬೇಕು. ಶುದ್ಧೀಕರಿಸಿದ ಕುಡಿಯುವ ನೀರು ಪೂರೈಸಬೇಕು ಎಂದು ತಿಳಿಸಿದರು.

ಬೀದಿನಾಯಿಗಳ ನಿಯಂತ್ರಣ–ಕ್ಕೆ ನಿಯಮಾವಳಿ ಪ್ರಕಾರ ಅಗತ್ಯವಿರುವ ಕ್ರಮಗಳನ್ನು ತೆಗೆದುಕೊಳ್ಳಬೇಕು.

ನಗರ ವೇಗವಾಗಿ ಬೆಳೆಯುತ್ತಿರುವುದ–ರಿಂದ ಕಸ ವಿಲೇವಾರಿ ಘಟಕಗಳನ್ನು ಸ್ಥಾಪಿಸುವ ಅಗತ್ಯವಿದೆ.

ನಾಲ್ಕೂ ದಿಕ್ಕುಗಳಲ್ಲಿ ಒಂದೊಂದು ಘಟಕಗಳನ್ನು ಸ್ಥಾಪಿಸುವ ಬಗ್ಗೆ ಗಂಭೀರವಾಗಿ ಪ್ರಯತ್ನಿಸಬೇಕು ಎಂದು ಸೂಚನೆ ನೀಡಿದರು.

ನಗರದಲ್ಲಿ ಎಲ್ಲ ಕಡೆಯೂ ಎಲ್.ಇ.ಡಿ. ದೀಪಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಬೇಕು. ಕೆಲವು ಕಡೆಗಳಲ್ಲಿ ಕಡಿಮೆ ಸಾಮರ್ಥ್ಯದ ದೀಪ ಅಳವಡಿಸಿರುವುದರಿಂದ ಸಮರ್ಪಕವಾಗಿ ಬೆಳಕು ದೊರಕುತ್ತಿಲ್ಲ. ಸಾಮರ್ಥ್ಯವನ್ನು ಹೆಚ್ಚಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಪ್ರವೇಶ ಮಾರ್ಗದಲ್ಲಿ ಇರುವ ಕಸದ ರಾಶಿಯನ್ನು ತೆರವುಗೊಳಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ನಾಲ್ಕು ಕಡೆಗಳಲ್ಲಿ ಕಸ ವಿಲೇವಾರಿ ಘಟಕ ಸ್ಥಾಪನೆಗೆ ಕೂಡಲೇ ಪ್ರಸ್ತಾವ ಸಿದ್ಧಪಡಿಸಬೇಕು. ಸರಕಾರದಿಂದ ಅಗತ್ಯವಿರುವ ಅನುಮೋದನೆ ಕೊಡಿಸಲಾಗುವುದು ಎಂದರು.

ನಗರದಲ್ಲಿ ಆರಂಭಿಸಲಾಗಿರುವ ಆರು ಇಂದಿರಾ ಕ್ಯಾಂಟೀನ್ ಗಳು ಯಾವ ರೀತಿ ನಡೆಸಲಾಗುತ್ತದೆ ಎಂದು ಪ್ರಶ್ನಿಸಿದ ಅವರು, ಬಸ್ ನಿಲ್ದಾಣ ಸೇರಿದಂತೆ ಜನನಿಬಿಡ ಪ್ರದೇಶಗಳಲ್ಲಿ ಹೆಚ್ಚಿನ ಜನ–ರಿಗೆ ಅನುಕೂಲವಾಗುವಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ನಿರ್ದೇಶನ ನೀಡಿದರು.

ಕುಟುಂಬ ಸಮೇತ ಅನೀರಿಕ್ಷಿತ ಭೇಟಿ ನೀಡಲಾಗುವುದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಆಸ್ತಿ ತೆರಿಗೆ, ಕಟ್ಟಡ ನಿರ್ಮಾಣ ಪರವಾನಿಗೆ ಹಾಗೂ ಸಿಸಿ ನೀಡುವುದಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು, ಇವುಗಳ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಪಾಲಿಕೆಯ ಆಯುಕ್ತರಿಗೆ ಶಾಸಕ ಆಸೀಫ್(ರಾಜು) ಸೇಠ್ ನಿರ್ದೇಶನ ನೀಡಿದರು.

ನಿರಂತರ ನೀರು(24x7) ಯೋಜನೆ ಕಾಮಗಾರಿ ವಿಳಂಬ ಹಾಗೂ ನೀರು ಸರಬರಾಜು ವ್ಯವಸ್ಥೆಯಲ್ಲಿ ಆಗುತ್ತಿರುವ ತೊಂದರೆಗಳನ್ನು ವಿವರಿಸಿದ ಶಾಸಕ ಸೇಠ್ ಅವರು, ಕುಡಿಯುವ ನೀರು ಪೂರೈಕೆಗೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಎಲ್.ಅಂಡ್ ಟಿ ಕಂಪನಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ಮಾರ್ಟ್ ಸಿಟಿ ಮೂಲ ಪ್ಲ್ಯಾನ್ ಒದಗಿಸಲು ಸೂಚನೆ: ಸ್ಮಾರ್ಟ್ ಸಿಟಿ ಯೋಜನೆಯ ಬಹುತೇಕ ಕಾಮಗಾರಿಗಳು ಬೆಳಗಾವಿ ದಕ್ಷಿಣ ಮತಕ್ಷೇತ್ರದಲ್ಲಿ ಮಾತ್ರ ಹೆಚ್ಚಿನ ಕೆಲಸ ಕೈಗೆತ್ತಿಕೊಳ್ಳಲಾಗಿದೆ ಎಂಬ ಸಾರ್ವಜನಿಕರ ಆರೋಪದ ಹಿನ್ನೆಲೆಯಲ್ಲಿ ಮಾತನಾಡಿದ ಶಾಸಕ ಸೇಠ್ ಅವರಯ, ಸ್ಮಾರ್ಟ್ ಸಿಟಿ ಯೋಜನೆಯ ಮೂಲ ರೂಪುರೇಷೆ ಏನಿತ್ತು ಮತ್ತು ನಂತರ ಮಾಡಲಾದ ಬದಲಾವಣೆಗಳ ಕುರಿತು ಮಾಹಿತಿಯನ್ನು ಒದಗಿಸುವಂತೆ ಅಧಿಕಾ–ರಿಗಳಿಗೆ ಸೂಚನೆ ನೀಡಿದರು.

## ಪಠ್ಯದಲ್ಲಿ ಬಸವಣ್ಣ, ಅಂಬೇಡ್ಕರ್ ಬಗ್ಗೆ ತಿರಿಚುವ ಕೆಲಸ ಬಿಜೆಪಿ ಮಾಡಿದೆ: ಸಚಿವ ಸತೀಶ ಜಾರಕಿಹೊಳಿ



ಬೆಳಗಾವಿ: ಪಠ್ಯ ಪುಸ್ತಕ ಪರಿಷ್ಕರಣೆ ವಿಚಾರವಾಗಿ ಬಿಜೆಪಿ ನೈಜ್ಯ ಸಂಗತಿ ತಿರಿಚುವಂತ ಪ್ರಯತ್ನ ಬಿಜೆಪಿ ಮಾಡಿದೆ. ಬಸವಣ್ಣವರು, ಅಂಬೇಡ್ಕರ್ ಅವರ ಬಗ್ಗೆ ತಿರುಚುವಂತ ಪ್ರಯತ್ನ ಮಾಡಿದೆ. ಅದನ್ನು ಬದಲಾವಣೆ ಮಾಡುವೆವು ಅಂತಾ ಮುಂಚೆ ಕೂಡ ಹೇಳಿದ್ದೇವು ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ನಿಪ್ಪಾಣಿಯಲ್ಲಿ ಅಭಿನಂದನಾ ಕಾರ್ಯಕ್ರಮ ನಂತರ ಮಾಧ್ಯಮಗಳಿಗೆ ಮಾತನಾಡಿದ ಅವರು, ನಾವು ತಜ್ಞರನ್ನು ಕೇಳಿಯೇ ಪರಿಷ್ಕರಣ ಮಾಡುತ್ತೇವೆ. ತಜ್ಞರ ಸಮೀತಿ ನೇಮಿಸುತ್ತೇವೆ. ಯಾವುದು ಮಾಡಬೇಕು ಇಲ್ಲವೋ ಎಂದು ತಜ್ಞರ ಮೂಲಕ ತಿಳಿದುಕೊಂಡು ಮಾಡುತ್ತೇವೆ ಎಂದು ಹೇಳಿದರು.

ಗೋ ಹತ್ಯೆ ನಿಷೇಧ ಕಾನೂನು ಹಿಂಪಡೆಯುವ ವಿಚಾರವಾಗಿ ಮಾತನಾಡಿದ ಅವರು, ನಾವು ಮನೆ ಮನೆಗೆ ಹೋಗಿ ಜನರನ್ನ ಈ ಕಾನೂನಿನ ಬಗ್ಗೆ ಕೇಳುತ್ತೇವೆ. ಅವರಿಗೆ ಇದು ಬೇಕೊ ಬೇಡವೋ ಎಂದು ಕೇಳಿ ತಿಳಿದುಕೊಳ್ಳುತ್ತೇವೆ. ಬಹುಮತದ ಪ್ರತಿಕ್ರಿಯೆಗಳನ್ನು ಪಡೆದುಕೊಂಡು ಅದರ ಪ್ರಕಾರ ನಡೆದುಕೊಳ್ಳುವೆವು ಎಂದರು.

## ಪ್ರತಿ ತಿಂಗಳ ಸರಾಸರಿ ಮೀರಿದ್ರೆ ಹೆಚ್ಚುವರಿ ಯೂನಿಟ್‌ನ ಹಣ ಕಟ್ಟಬೇಕು: ಇಂಧನ ಸಚಿವ ಕೆ.ಜೆ. ಜಾರ್ಜ್

ಬೆಂಗಳೂರು: ಕಾಂಗ್ರೆಸ್ ಸರ್ಕಾರದ ಗೃಹಜ್ಯೋತಿ ಗ್ಯಾರಂಟಿಗೆ ಜನತೆಯಲ್ಲಿ ಹಲವು ಗೊಂದಲಗಳು ಉಳಿದುಕೊಂಡಿವೆ. ಈ ಎಲ್ಲಾ ಗೊಂದಲಗಳಿಗೆ ತೆರೆಎಳೆಯಲು ಇಂಧನ ಸಚಿವ ಕೆಜೆ ಜಾರ್ಜ್ ಬುಧವಾರ ಸುದ್ದಿಗೋಷ್ಠಿ ನಡೆಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೆಜೆ ಜಾರ್ಜ, ಈಗಾಗಲೇ ಸಿಎಂ ಗೃಹಜ್ಯೋತಿ ಯೋಜನೆ ಬಗ್ಗೆ ವಿಸ್ಕೃತವಾಗಿ ತಿಳಿಸಿದ್ದಾರೆ. 200 ಯೂನಿಟ್ ವರೆಗೆ ಪ್ರತಿಯೊಬ್ಬರಿಗೆ ಉಚಿತವಾಗಿ ವಿದ್ಯುತ್ ಕೊಡುವ ಯೋಜನೆ ಇದಾಗಿದೆ. ಗೃಹಬಳಕೆಯ ಗ್ರಾಹಕರ ಒಂದು ವರ್ಷದ ಸರಾಸರಿ ತೆಗೆದುಕೊಂಡು 10% ಸೇರಿಸಿ ವಿದ್ಯುತ್ ಉಚಿತ ಕೊಡುತ್ತಿದ್ದೇವೆ ಎಂದು ತಿಳಿಸಿದರು.

ಗೃಹಜ್ಯೋತಿ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಲು ಜನರು ಆಧಾರ್ ಕಾರ್ಡ್ ಅನ್ನು ಆರ್‌ಆರ್ ನಂಬರ್‌ಗೆ ಲಿಂಕ್ ಮಾಡಬೇಕು. ವಾಸದ ಕರಾರು ಪತ್ರ ಅಥವಾ ವೋಟರ್ ಐಡಿ ನೀಡಬೇಕು. ಬಾಡಿಗೆ ಮನೆಯವ–ರಿಗೂ, ಸ್ವಂತ ಮನೆಯವರಿಗೂ ಇದು ಅನ್ವಯಿಸುತ್ತದೆ. ಬೆಂಗಳೂರು ಒನ್ ಸೇವಾಕೇಂದ್ರದಲ್ಲಿ ಈ ವ್ಯವಸ್ಥೆಯನ್ನು ಪಡೆಯಬಹುದು ಎಂದು ಮಾಹಿತಿ ನೀಡಿದರು.

ಜೂನ್ 15 ರಿಂದ ನೋಂದಣಿ ಆರಂಭವಾಗಿ, ಆಗಸ್ಟ್ 1 ರಿಂದ ಯೋಜನೆ ಜಾರಿಗೆ ಬರಲಿದೆ. 2 ಕೋಟಿ 16 ಲಕ್ಷ ಗೃಹಬಳಕೆ ಗ್ರಾಹಕರು ಇದ್ದಾರೆ. ಅದರಲ್ಲಿ 2 ಕೋಟಿ 14 ಲಕ್ಷ ಗ್ರಾಹಕರು 200 ಯೂನಿಟ್ ಒಳಗೆ ಬಳಕೆ ಮಾಡುವವರು ಇದ್ದಾರೆ. 2 ಲಕ್ಷ ಮಾತ್ರ 200 ಯೂನಿಟ್‌ಗೂ ಹೆಚ್ಚು ವಿದ್ಯುತ್ ಬಳಕೆ ಮಾಡುವವರು ಇದ್ದಾರೆ. ಅದರಲ್ಲಿ 53 ಯೂನಿಟ್ ಅತಿ ಹೆಚ್ಚು ಬಳಕೆ ಮಾಡುವವರು ಇದ್ದಾರೆ ಎಂದು ಹೇಳಿದರು.

200 ಯೂನಿಟ್ ಒಳಗೆ ಇದ್ದರೂ ಹೆಚ್ಚುವರಿ ಟ್ಯಾಕ್ಸ್ ಅನ್ವಯ ಆಗುತ್ತದೆ. ಆದರೆ ಫಿಕ್ಸ್ಡ ಚಾರ್ಜ್ ಇರಲ್ಲ. ಸರಾಸರಿ



ಬಳಕೆಯ 10% ಹೆಚ್ಚುವರಿ ಆದ ಬಳಿಕದ ಹೆಚ್ಚುವರಿ ಯೂನಿಟ್‌ಗೆ 9% ಟ್ಯಾಕ್ಸ್ ಬೀಳುತ್ತದೆ. ಪ್ರತಿ ತಿಂಗಳ ಸರಾಸರಿ ಮೀರಿದರೆ ಹೆಚ್ಚುವರಿ ಯೂನಿಟ್‌ನ ಹಣ ಕಟ್ಟಬೇಕು. 200 ಯೂನಿಟ್ ಮೇಲ್ಪಟ್ಟ ಬಳಕೆದಾರರು ಮುಂದಿನ ವರ್ಷ ಏನಾದರೂ ಕಡಿಮೆ ಬಳಕೆ ಮಾಡಿದರೆ ಅದರ ಬಗ್ಗೆ ಮುಂದಿನ ದಿನಗಳಲ್ಲಿ ಚರ್ಚಿಸಲಾಗುವುದು ಎಂದು ಸ್ಪಷ್ಟಪಡಿಸಿದರು. ಇದನ್ನೂ ಓದಿ: ಚುನಾವಣೆ ಗೆಲ್ಲೋಕೆ ಚೀಪ್ ಪಾಪ್ಯುಲಾ–ರಿಟಿ ಮಾಡಬೇಕು– ಗ್ಯಾರಂಟಿಗಳ ಬಗ್ಗೆ ಕೃಷಿ ಸಚಿವ ಬಾಂಬ್.

ನೋಂದಣಿ ಹೇಗೆ?

* ಸೇವಾ ಸಿಂಧು ಪೋರ್ಟಲ್‌ನಲ್ಲಿ ಯೋಜನೆಗಾಗಿ ಅಪ್ಲೈ ಮಾಡಬೇಕು. ಅದರಲ್ಲಿ ಪ್ರತ್ಯೇಕ ವ್ಯವಸ್ಥೆಯ ಪೋರ್ಟಲ್ ಲಭ್ಯವಿರುತ್ತದೆ.
* ಆಧಾರ್ ಕಾರ್ಡ್ ಬೇಕು, ಕನೆಕ್ಷನ್ ಐಡಿ, ಸ್ವಂತ ಕನೆಕ್ಷನ್ ಇದ್ದರೆ ಹೆಚ್ಚುವರಿ ಮಾಹಿತಿ ಬೇಡ.
* ಸ್ವಂತ ಮನೆ ಇಲ್ಲದವರು ಕರಾರು ಪತ್ರ ನೀಡಬೇಕು.
* ಸ್ವಯಂ ರಿಜಿಸ್ಟ್ರೇಷನ್ ಮಾಡಿಕೊಳ್ಳಬಹುದು.
* ಬಾಡಿಗೆದಾರರು ಲೀಸ್ ಅಗ್ರಿಮೆಂಟ್ ವೋಟರ್ ಐಡಿ (ಅದೇ ಮನೆಯ ಅಡ್ರೆಸ್), ಕರಾರು ಪತ್ರ ಸಲ್ಲಿಸಬೇಕು.
* ಆಧಾರ್, ಆರ್‌ಆರ್, ನಂಬರ್ ಬೇಕು.
* ನೋಟರಿ, ರಿಜಿಸ್ಟರ್ ಎರಡು ಆಗುತ್ತೆ ಕರಾರು. ಅದಕ್ಕೆ ಕಂಡಿಷನ್ ಇರುವುದಿಲ್ಲ.
* ಬೋಗಸ್ ಎಂಬುದು ಗೊತ್ತಾದರೆ ಕ್ರಮ ತೆಗೆದುಕೊಳ್ಳಲಾಗುತ್ತದೆ. ಹಾಗೂ ಅವರಿಗೆ ಯೋಜನೆ ಕ್ಯಾನ್ಸಲ್ ಆಗುತ್ತದೆ.

ಗೃಹಜ್ಯೋತಿ ಯೋಜನೆ ಹೊರರಾಜ್ಯದವರಿಗೂ ಸಿಗಲಿದೆ. ಆಸ್ತಿ ತೆರಿಗೆ ಕಡ್ಡಾಯ ಇಲ್ಲ.

ನೋಂದಣಿ ಜೂನ್ 15 ರಿಂದ ಆರಂಭವಾಗಿ ಜುಲೈ 5 ರವರೆಗೆ ಅವಕಾಶ ಇರುತ್ತದೆ.

ಹೊಸ ಬಾಡಿಗೆದಾರರು ಅಥ–ವಾ 12 ತಿಂಗಳಿಗಿಂತ ಕಡಿಮೆ ವಾಸವಾಗಿರುವವರ ಬಗ್ಗೆ ಕ್ಯಾಬಿನೆಟ್‌ನಲ್ಲಿ ಚರ್ಚೆ ಮಾಡಲಾಗುತ್ತದೆ. ಇದರ ಬಗ್ಗೆ ಇನ್ನೆರಡು ದಿನಗಳಲ್ಲಿ ಘೋಷಣೆ ಮಾಡುತ್ತೇವೆ. ಹೊಸ ಮಾರ್ಗಸೂಚಿ 2 ದಿನದಲ್ಲಿ ಕ್ಯಾಬಿನೆಟ್‌ನಲ್ಲಿ ಚರ್ಚೆ ಆಗಲಿದೆ ಎಂದರು.

## ಬೆಳಗಾವಿಯಲ್ಲಿ ಟ್ರಾಫಿಕ್ ಪೊಲೀಸರಂತೆ ಕಾರ್ಯ ನಿರ್ವಹಿಸಿದ ಬೈಕ್ ಸವಾರ



ಬೆಳಗಾವಿ: ಕುಂದಾನಗರಿಯಲ್ಲಿ ಬೈಕ್ ಸವಾರನೊಬ್ಬ ಸಂಚಾರ ದಟ್ಟಣೆ ವೇಳೆ ತಾವೇ ಸ್ವತಃ ಸಂಚಾರ ನಿರ್ವಹಣೆ ಮಾಡುವ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ.

ಹೌದು.. ನಗರದ ಕಪಿಲೇಶ್ವರ ಮೇಲ್ಸೇತುವೆ ಬಳಿಯ ಶನಿಮಂದಿರ ಕ್ರಾಸ್ನಲ್ಲಿ ಮಧ್ಯಾಹ್ನ 12.30ರ ಸುಮಾರಿಗೆ ಫುಲ್ ಟ್ರಾಫಿಕ್ ಜಾಮ್ ಉಂಟಾಗಿತ್ತು. ಇದೇ ರಸ್ತೆಯ ಮೂಲಕ ಬೈಕ್ನಲ್ಲಿ ಸದಾಶಿವ ನಗರದ ನಿವಾಸಿ ಪ್ರಸಾದ ಚೌಗುಲೆ ಎಂಬುವವರು ಹೋಗುತ್ತಿದ್ದರು. ಈ ಸಂದರ್ಭದಲ್ಲಿ ಭಾರಿ ಸಂಚಾರ ದಟ್ಟಣೆಯಾಗಿದ್ದನ್ನು ಗಮನಿಸಿದ್ದಾರೆ. ಬಳಿಕ ತಮ್ಮ ಬೈಕ್ ಅನ್ನು ರಸ್ತೆ ಪಕ್ಕ ನಿಲ್ಲಿಸಿ, ಟ್ರಾಫಿಕ್ ಪೊಲೀಸರಂತೆ ರಸ್ತೆ ಮಧ್ಯ ನಿಂತುಕೊಂಡು ಸಂಚಾರ ನಿರ್ವಹಣೆ ಮಾಡಿದ್ದಾರೆ.

ಪ್ರಸಾದ ಚೌಗುಲೆ ಅವರು ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಟ್ರಾಫಿಕ್ ಪೊಲೀಸರಂತೆ ಕೆಲಸ ಮಾಡಿ ಟ್ರಾಫಿಕ್ ಕಂಟ್ರೋಲ್ ಮಾಡಿದ್ದು, ಸದ್ಯ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದ್ದಾರೆ. ನಂತರ ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಸಂಚಾರಿ ಪೊಲೀಸರು ಪ್ರಸಾದ್ ಅವರ ಕಾರ್ಯಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

## ಕೇಂದ್ರ ಬಸ್ ನಿಲ್ದಾಣದಲ್ಲಿ ವಿಶ್ವ ಪರಿಸರ ದಿನಾಚರಣೆ



ಬೆಳಗಾವಿ: ಬೆಳಗಾವಿಯಲ್ಲಿ ಜೂ.5 2023 ರಂದು ಬೆಳಗಾವಿ ನೂತನ ಕೇಂದ್ರ ಬಸ್ ನಿಲ್ದಾಣದಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

ಸದರಿ ಕಾರ್ಯಕ್ರಮದಲ್ಲಿ ಕೇಂದ್ರ ಬಸ್ ನಿಲ್ದಾಣದಲ್ಲಿ ಸಸಿಗಳನ್ನು ನೆಡುವುದು ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಸಸಿಗಳನ್ನು ವಿತರಣೆ ಮಾಡುವ ಮೂಲಕ ವಿಶ್ವ ಪರಿಸರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಯಿತು.

ಸಂದರ್ಭದಲ್ಲಿ IFS,ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ ಚವ್ಹಾಣ, IFS, ಉಪ ಅರಣ್ಯ ಸಂರಕ್ಷಣಾಧಿಕಾರಿ ಹರ್ಷಭಾನು, ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಗಣೇಶ್ ರಾಥೋಡ್ ಹಾಗೂ ವಿಭಾಗದ ಎಲ್ಲಾ ಅಧಿಕಾ–ರಿಗಳು ಉಪಸ್ಥಿತರಿದ್ದರು.

## ಪರಿಹಾರದ ಹಣಕ್ಕಾಗಿ ಸತ್ತ ವ್ಯಕ್ತಿಯನ್ನು ಪತಿ ಎಂದ ಮಹಿಳೆ



ಭುವನೇಶ್ವರ: ಸರ್ಕಾರದ ಪರಿಹಾರದ ಹಣ ಪಡೆಯಲು ಬಾಲಸೋರ್ ರೈಲು ದುರಂತದಲ್ಲಿ ಪತಿ ಮೃತಪಟ್ಟಿದ್ದಾನೆ ಎಂದು ಮಹಿಳೆಯೊಬ್ಬಳು ಕತೆಕಟ್ಟಿದ ಪ್ರಕರಣ ಒಡಿಶಾದ ಕಟಕ್ನಲ್ಲಿ ನಡೆದಿದೆ.

ಇದೀಗ ಕತೆಕಟ್ಟಿದ ಪತ್ನಿಯ ವಿರುದ್ಧ ಪತಿ ಬಹನಾಗಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾನೆ. ಅಲ್ಲದೇ ಪರಿಹಾರದ ಹಣ ಪಡೆಯಲು ಈ ರೀತಿ ಸಂಚು ರೂಪಿಸಿದ್ದಾಳೆ ಎಂದು ಆರೋಪಿಸಿದ್ದಾನೆ. ಸಾರ್ವಜನಿಕರ ಹಣವನ್ನು ದೋಚಲು ಯತ್ನಿಸಿದ ಗೀತಾಂಜಲಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಪತಿ ಒತ್ತಾಯಿಸಿದ್ದಾನೆ. ಈಗ ಬಂಧನದ ಭೀತಿಯಿಂದ ಮಹಿಳೆ ತಲೆಮರೆಸಿಕೊಂಡಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

ಗೀತಾಂಜಲಿ ದತ್ತಾ ಎಂಬಾಕೆ ರೈಲು ಅಪಘಾತದಲ್ಲಿ ತನ್ನ ಪತಿ ಬಿಜಯ್ ದತ್ತಾ ಸಾವನ್ನಪ್ಪಿದ್ದಾನೆ ಎಂದು ಹೇಳಿಕೊಂಡಿದ್ದಳು. ಅಲ್ಲದೆ ಮೃತದೇಹವೊಂದನ್ನು ತನ್ನ ಗಂಡನದ್ದೇ ಎಂದು ಗುರುತಿಸಿದ್ದಳು. ಆದ–ರೆ ದಾಖಲೆಗಳ ಪರಿಶೀಲನೆಯ ನಂತರ ಆಕೆ ಹೇಳುತ್ತಿರುವುದು ಸುಳ್ಳು ಎಂದು ತಿಳಿದುಬಂದಿದೆ. ಬಳಿಕ ಪೊಲೀಸರು ಎಚ್ಚರಿಕೆ ನೀಡಿ ಕಳುಹಿಸಿದ್ದರು.

ಈ ಪ್ರಕರಣದ ಬಳಿಕ ರೈಲ್ವೇ ಇಲಾಖೆ, ಮೃತದೇಹಗಳ ನಕಲಿ ವಾರಸುದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಪೊಲೀಸ–ರಿಗೆ ಸೂಚಿಸಿತ್ತು. ಈ ಪ್ರಕರಣದ ಪತಿ ಹಾಗೂ ಪತ್ನಿ ಕಳೆದ 13 ವರ್ಷಗಳಿಂದ ಬೇರೆಬೇರೆಯಾಗಿ ವಾಸಿಸುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

## ಹಳಿತಪ್ಪಿದ ಎಲ್‌ಪಿಜಿ ಸಾಗಿಸ್ತಿದ್ದ ಗೂಡ್ಸ್ ರೈಲು




ಭೋಪಾಲ್: ಎಲ್‌ಪಿಜಿ ಸಾಗಿಸಲಾಗುತ್ತಿದ್ದ ಗೂಡ್ಸ್ ರೈಲಿನ 2 ವ್ಯಾಗನ್‌ಗಳು ಹಳಿ ತಪ್ಪಿರುವ ಘಟನೆ ಮಧ್ಯಪ್ರದೇಶದ ಜಬಲ್‌ಪುರದ ಶಹಪುರದಲ್ಲಿ ನಡೆದಿದೆ ಎಂದು ಬುಧವಾರ ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ. ಸದ್ಯ ಭಾರೀ ದುರಂತ ತಪ್ಪಿದೆ.

ಗೂಡ್ಸ್ ರೈಲಿನಿಂದ ಅನ್‌ಲೋಡ್ ಮಾಡಲು ಇರಿಸಿದ್ದಾಗ ಘಟನೆ ನಡೆದಿದೆ ಎಂದು ಪಶ್ಚಿಮ ಸೆಂಟ್ರಲ್ ರೈಲ್ವೆ ಸಿಪಿಆರ್‌ಒ ಮಾಹಿತಿ ನೀಡಿದೆ.

ಕಳೆದ ರಾತ್ರಿ ಗೂಡ್ಸ್ ರೈಲಿನ ಎಲ್‌ಪಿಜಿ ರೇಕ್‌ನ ಎರಡು ವ್ಯಾಗನ್‌ಗಳನ್ನು ಇಳಿಸಲು ಮುಂದಾದಾಗ ಹಳಿತಪ್ಪಿದೆ. ಸದ್ಯ ರೈಲುಗಳ ಯಾವುದೇ ಮುಖ್ಯ ಸಂಚಾರಕ್ಕೆ ತೊಂದರೆಯಾಗಿಲ್ಲ. ಮುಖ್ಯ ಮಾರ್ಗದಲ್ಲಿ ರೈಲು ಸಂಚಾರ ಸಾಮಾನ್ಯವಾಗಿದೆ. ಬೆಳಗ್ಗೆ ಸೈಡಿಂಗ್ ಅಧಿಕಾ–ರಿಗಳ ಸಮ್ಮುಖದಲ್ಲಿ ಹಳಿತಪ್ಪಿದ ರೈಲನ್ನು ಮರುಸ್ಥಾಪಿಸಲಾಗಿದೆ ಎಂದು ರೈಲ್ವೆ ತಿಳಿಸಿದೆ.

ಕಳೆದ ವಾರ ಒಡಿಶಾದ ಬಾಲಸೋರ್‌ನಲ್ಲಿ 3 ರೈಲುಗಳು ಅಪಘಾತಕ್ಕೀಡಾಗಿದ್ದು, 275 ಜನರು ಸಾವನ್ನಪ್ಪಿದ್ದಾರೆ. 1,000ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಈ ಘಟನೆ ದೇಶದಲ್ಲೇ ಸಂಭವಿಸಿದ ಅತ್ಯಂತ ಭೀಕರ ರೈಲ್ವೆ ದುರಂತಗಳಲ್ಲಿ ಒಂದು ಎನಿಸಿಕೊಂಡಿದೆ.

ಈ ಕಹಿ ಘಟನೆ ಮಾಸುವ ಮುನ್ನವೇ ಮಂಗಳವಾರ ಜಾರ್ಖಂಡ್‌ನಲ್ಲಿ ರೈಲು ದುರಂತವೊಂದು ತಪ್ಪಿದೆ. ಜಾರ್ಖಂಡ್‌ನ ಬೊಕಾರೊದಲ್ಲಿ ಸಂತಾಲ್ದಿಹ್ ರೈಲ್ವೆ ಕ್ರಾಸಿಂಗ್ ಬಳಿ ರೈಲ್ವೆ ಗೇಟ್‌ಗೆ ಟ್ರ್ಯಕ್ಟರ್ ಸಿಲುಕಿಕೊಂಡಿತ್ತು. ದೂರದಿಂದಲೇ ಇದನ್ನು ಗಮನಿಸಿದ ಲೋಕೋ ಪೈಲಟ್ ಕೂಡಲೆ ರೈಲಿನ ವೇಗವನ್ನು ಕಡಿಮೆ ಮಾಡಿ ಅನಾಹುತವನ್ನು ತಪ್ಪಿಸಿದ್ದಾರೆ.

## ಮೌಲ್ಯಗಳ ಪುನರುತ್ಥಾನಕ್ಕೆ ಮಹಾತ್ಮರ ಕೊಡುಗೆ ಅಪಾರ: ಶ್ರೀ ರಂಭಾಪುರಿ ಜಗದ್ಗುರು



ಚಿಕ್ಕಮಗಳೂರು: ಭಾರತೀಯ ಸಂಸ್ಕೃತಿಯಲ್ಲಿ ಆಧ್ಯಾತ್ಮ ಮತ್ತು ಧರ್ಮಕ್ಕೆ ವಿಶೇಷ ಮಹತ್ವವಿದೆ. ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳ ಪುನರುತ್ಥಾನಕ್ಕೆ ಶ್ರೀ ಜಗದ್ಗುರು ರೇಣುಕಾಚಾರ್ಯರ ಹಾಗೂ ಬಸವಣ್ಣನವರ ಕೊಡುಗೆ ಅಪಾರವಾದುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ಸಮುದಾಯ ಭವನದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕ–ಶ್ರೀ ಬಸವ ಜಯಂತ್ಯುತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸುಖ ಶಾಂತಿಯ ಬದುಕಿಗೆ ಧರ್ಮಾಚರಣೆ ಮುಖ್ಯ. ಸಂಸ್ಕಾರದಿಂದ ಸಂಸ್ಕೃತಿ ಬೆಳೆಯಲು ಸಾಧ್ಯ. ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಮತ್ತು ಬಸವಣ್ಣನವರ ವಿಚಾರ ಧಾರೆಗಳು ಆಶಾಕಿರಣ. ಸತ್ಯ ಶುದ್ಧವಾದ ಜೀವನ ಮಾರ್ಗ ಅನುಸರಿಸಿ ಬಾಳುವಂತಾಗಲು ಶ್ರೀ ಗುರುವಿನ ಮಾರ್ಗದರ್ಶನ ಹಾಗೂ ಬೋಧಾಮೃತ ಅವಶ್ಯಕ. ವೀರಶೈವ ಧರ್ಮದಲ್ಲಿ ಜೀವ ಶಿವನಾಗುವ, ಅಂಗ ಲಿಂಗವಾಗುವ, ನರ ಹರನಾಗುವ, ಭವಿ ಭಕ್ತನಾಗುವ ಆದರ್ಶ ದಾ–ರಿಯನ್ನು ತೋರಿದವರು ಶ್ರೀ ಜಗದ್ಗುರು ರೇಣುಕಾಚಾರ್ಯರು. ಇದೇ ದಾರಿಯಲ್ಲಿ ಬಸವಣ್ಣನವರು ಮುನ್ನಡೆದು ಸಕಲ ಜೀವಾತ್ಮರ ಒಳಿತಿಗಾಗಿ ಶ್ರಮಿಸಿದ್ದಾರೆ. ನೀರು ಎರೆಯ ಬಂದವರಿಗೂ ಕಡಿಯ ಬಂದವರಿಗೂ ಮರ ನೆರಳು ಹಣ್ಣು ಕೊಡುವಂತೆ ಮಹಾತ್ಮರು ನೋವು ನುಂಗಿ ಸಮಾಜಕ್ಕೆ ಬೆಳಕು ತೋರಿದರು. ಮನುಷ್ಯ ಜೀವನದಲ್ಲಿ ಯಾವ ವಿಶ್ವಾಸ ಹೋದರೂ ಚಿಂತಿಸಬೇಕಾಗಿಲ್ಲ. ಆದರೆ ಆತ್ಮ ವಿಶ್ವಾಸವನ್ನು ಕಳೆದುಕೊಳ್ಳಬಾರದು. ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವ ಸಿದ್ಧಾಂತ ಬಸವಣ್ಣನವರ ಸಾಮಾಜಿಕ ನಿಲುವು ಸಮಾಜದ ಉನ್ನತಿಗೆ ಭದ್ರ ಬುನಾದಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

ಚಿಕ್ಕಮಗಳೂರು ಶಾಸಕರಾದ ಹೆಚ್.ಡಿ.ತಮ್ಮಯ್ಯ ಪೂಜಾ ಸಮಾರಂಭ ಉದ್ಘಾಟಿಸಿ ಧರ್ಮ ಪರಿಪಾಲನೆಯಿಂದ ಶಾಂತಿ ನೆಲೆಸಲು ಸಾಧ್ಯ. ಶ್ರೀ ಗುರುವಿನ ಕಾರುಣ್ಯದ ಬಲ ಭಕ್ತ ಸಮುದಾಯಕ್ಕೆ ಸಂಜೀವಿನಿ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಶ್ರೀ ರಕ್ಷೆ ನಮ್ಮೆ ನಿಮ್ಮೆಲ್ಲರ ಮೇಲಿರಲೆಂದು ಬಯಸಿದರು. ಸಮಾರಂಭದ ಅಧ್ಯಕ್ಷತೆಯನ್ನು ಹುಲಿಕೆರೆ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ವಹಿಸಿ ಮಾತನಾಡಿದರು.

ಶಂಕರದೇವರ ಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ಬೇರುಗಂಡಿ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು.

ವಿಶೇಷ ಆಹ್ವಾನಿತರಾಗಿ ಮಾಜಿ ವಿಧಾನ ಪರಿಷತ್ ಸದಸ್ಯೆ ಗಾಯತ್ರಿ ಶಾಂತೇಗೌಡ ಹಾಗೂ ನಗರ ವೀರಶೈವ ಸಮಾಜದ ಅಧ್ಯಕ್ಷ ಮಲ್ಲೇಗೌಡರು ಪಾಲ್ಗೊಂಡಿದ್ದರು. ಮಾಜಿ ಶಾಸಕ ಸಿ.ಟಿ. ರವಿ ಆಗಮಿಸಿ ಶ್ರೀ ರಂಭಾಪುರಿ ಜಗದ್ಗುರುಗಳ ದರ್ಶನಾಶೀರ್ವಾದ ಪಡೆದರು.

ಟ್ರಸ್ಟಿನ ಸದಸ್ಯ ಬಿ.ಎ.ಶಿವಶಂಕರ ಪ್ರಾಸ್ತಾವಿಕ ಮಾತನಾಡಿದರು. ಟ್ರಸ್ಟಿನ ಸದಸ್ಯರಾದ ಎಂ.ಡಿ.ಪುಟ್ಟಸ್ವಾಮಿ, ಎಸ್. ಎಂ.ದೇವಣ್ಣಗೌಡ, ಜೆ.ಬಿ. ಶಿವಪ್ಪಗೌಡ ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089